ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
DAIRYADA DAARI NEWS PAPER
EMAIL : dairyadadaari@gmail.com ಸಂಪುಟ: 01 ಸಂಚಿಕೆ: 89
ಬೆಲೆ ರೂ : 2.00
ರಾಯಚೂರು
ಪುಟ: 4
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795 ಶುಕ್ರವಾರ: 13–03–2026

**SEHRI & IFTARI TIME**
DAY :FRIDAY
RAMZAN : 23
DATE: 13.03.2026
END TIME OF SEHRI :5:15 AM
FAJAR AZAAN : 5:20 AM

IFTAR TIME : 6:33 PM



ಸೈಯದ್ ಅಹ್ಮದ್ ಹುಸೇನಿ ಮತ್ ವಾಲೆ
ಕಾರ್ಯದರ್ಶಿಗಳು : ಮತ್ ವಾಲೆ ಸಾಹೇಬ್ ಪಬ್ಲಿಕ್ ಸ್ಕೂಲ್ ಮಾನ್ವಿ
ಸಂಪಾದಕರು : ಧೈರ್ಯದ ದಾರಿ ಕನ್ನಡ ದಿನಪತ್ರಿಕೆ

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

## ಗ್ರಾಮೀಣ ಮಹಿಳೆಯರ ಉತ್ಪನ್ನಗಳಿಗೆ ಸಂಜೀವಿನಿ ಇ–ಮಾರ್ಟ್ ಉತ್ತೇಜನ: ತಾ.ಪಂ ಇಓ ಖಾಲೀದ್ ಅಹ್ಮದ್

**ಮಾನ್ವಿ,ಮಾ,12–** ಮಹಿಳಾ ಸ್ವ–ಸಹಾಯ ಸಂಘಗಳು ತಯಾರಿಸುವ ವಿವಿಧ ಉತ್ಪನ್ನಗಳನ್ನು ಮಾರುಕಟ್ಟೆಗೆ ತಲುಪಿಸುವ ಉದ್ದೇಶದಿಂದ ಸಂಜೀವಿನಿ ಇ–ಮಾರ್ಟ್ ಆರಂಭಿಸಿದ್ದು, ಗ್ರಾಮೀಣ ಮಹಿಳೆಯರ ಉತ್ಪನ್ನಗಳಿಗೆ ಸಂಜೀವಿನಿ ಇ–ಮಾಟ್ ಉತ್ತೇಜನಕಾರಿ ಎಂದು ಮಾನವಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಖಾಲೀದ್ ಅಹ್ಮದ್ ಅವರು ಹೇಳಿದರು.

ಮಾರ್ಚ್ 12ರ ಗುರುವಾರ ದಂದು ಜಿಲ್ಲೆಯ ಮಾನವಿ ಪಟ್ಟಣದ ಹಳೇ ತಾಲೂಕು ಪಂಚಾಯಿತಿ ಕಟ್ಟಡದಲ್ಲಿ ಜಿಲ್ಲಾ ಪಂಚಾಯಿತಿ, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ತಾಲೂಕು ಪಂಚಾಯಿತಿ ಮಾನವಿ, ಸಂಜೀವಿನಿ–ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಅಭಿಯಾನ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ನೂತನವಾದ ಸಂಜೀವಿನಿ ಇ–ಮಾರ್ಟ್ ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮೀಣ ಮಹಿಳೆಯರ ಆರ್ಥಿಕ ಸಬಲೀಕರಣವನ್ನು ಗುರಿಯಾಗಿಸಿಕೊಂಡು ಕಾರ್ಯನಿರ್ವಹಿಸುತ್ತಿರುವ ಸಂಜೀವಿನಿ ಯೋಜನೆ ಅಡಿಯಲ್ಲಿ ಸಂಜೀವಿನಿ ಇ–ಮಾಟ್ ವ್ಯವಸ್ಥೆಯನ್ನು ಆರಂಭಿಸಲಾಗಿದೆ. ಮಹಿಳಾ ಸ್ವ–ಸಹಾಯ ಸಂಘಗಳು ತಯಾರಿಸುವ ವಿವಿಧ ಉತ್ಪನ್ನಗಳನ್ನು ಮಾರುಕಟ್ಟೆಗೆ ತಲುಪಿಸುವ



ಉದ್ದೇಶದಿಂದ ಈ ಯೋಜನೆ ರೂಪುಗೊಂಡಿದ್ದು, ಅದರ ನಿರ್ವಹಣೆಯ ಜವಾಬ್ದಾರಿಯನ್ನು ಶ್ರೀನಿಧಿ ಸಂಜೀವಿನಿ ಮಹಿಳಾ ಸಂಘಕ್ಕೆ ನೀಡಲಾಗಿದೆ ಎಂದರು.

ಸಂಜೀವಿನಿ ಇ–ಮಾರ್ಟ್ ಕೇಂದ್ರ ತಾಲೂಕು ಮಟ್ಟದಲ್ಲಿ ಕಾರ್ಯನಿರ್ವಹಿಸಲಿದ್ದು, ಮಹಿಳಾ ಸಂಘದ ಸದಸ್ಯರು ಉತ್ಪನ್ನಗಳ ಸಂಗ್ರಹ, ಗುಣಮಟ್ಟ ಪರಿಶೀಲನೆ, ಪ್ರದರ್ಶನ ಹಾಗೂ ಮಾರಾಟದ ಕಾರ್ಯಗಳನ್ನು ನೋಡಿಕೊಳ್ಳಲಿದ್ದಾರೆ. ಸ್ಥಳೀಯ ಉತ್ಪನ್ನಗಳಿಗೆ ಉತ್ತಮ ಮಾರುಕಟ್ಟೆ ಒದಗಿಸುವುದರ ಜೊತೆಗೆ ಗ್ರಾಹಕರಿಗೂ ಗುಣಮಟ್ಟದ ವಸ್ತುಗಳು ಲಭ್ಯವಾಗಲಿವೆ. ಇ–ಮಾರ್ಟ್ ವ್ಯವಸ್ಥೆಯ ಮೂಲಕ ಮಹಿಳಾ ಸ್ವ–ಸಹಾಯ ಸಂಘಗಳು ತಮ್ಮ ಉತ್ಪನ್ನಗಳನ್ನು ವ್ಯಾಪಕವಾಗಿ ಪರಿಚಯಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಈ ಹಿಂದೆ ಮಾರುಕಟ್ಟೆ ಸೌಲಭ್ಯಗಳ ಕೊರತೆಯಿಂದ ಅನೇಕ ಉತ್ಪನ್ನಗಳು ಸ್ಥಳೀಯ ಮಟ್ಟದಲ್ಲೇ ಸೀಮಿತವಾಗಿದ್ದವು. ಈಗ ಈ ಹೊಸ ವ್ಯವಸ್ಥೆಯಿಂದ ಗ್ರಾಮೀಣ ಉತ್ಪನ್ನಗಳು ಹೆಚ್ಚಿನ ಪ್ರಮಾಣದಲ್ಲಿ ಮಾರಾಟವಾಗುವ ಸಾಧ್ಯತೆ ಇದೆ. ಗ್ರಾಮೀಣ ಪ್ರದೇಶದಲ್ಲಿನ ಮಹಿಳಾ ಸಂಘದ ಸದಸ್ಯರು ಈ ಹೊಸ ಜವಾಬ್ದಾರಿಯನ್ನು ಉತ್ಸಾಹದಿಂದ ಸ್ವೀಕರಿಸಿದ್ದು, ತಮ್ಮ ಉತ್ಪನ್ನಗಳಿಗೆ ಉತ್ತಮ ಮೌಲ್ಯ ದೊರೆಯುವ ನಿರೀಕ್ಷೆ ವ್ಯಕ್ತಪಡಿಸಿದ್ದಾರೆ. ಈ ಕೇಂದ್ರಗಳು ಮಹಿಳೆಯರ ಆತ್ಮವಿಶ್ವಾಸವನ್ನು ಹೆಚ್ಚಿಸುವುದರ ಜೊತೆಗೆ ಕುಟುಂಬಗಳ ಆರ್ಥಿಕ ಸ್ಥಿತಿಗೂ ಸಹಕಾರಿಯಾಗಲಿದೆ ಎಂದರು.

ಪಂಚಾಯತ್ ರಾಜ್ ಇಲಾಖೆ ಸಹಾಯಕ ನಿರ್ದೇಶಕಿ ದೀಪಾ ಅರಳಿಕಟ್ಟೆ ಅವರು ಮಾತನಾಡಿ, ಸಂಜೀವಿನಿ ಇ–ಮಾರ್ಟ್ ಮೂಲಕ ಮಹಿಳೆಯರ ಉತ್ಪನ್ನಗಳಿಗೆ 2ನೇಪುಟಕ್ಕೆ

## ಪಟ್ಟಣ ಸ್ವಚ್ಛತಾ ಕಾಯಕದ ಮಹಿಳೆಯರಿಗೆ ಪಟ್ಟಣ ಪಂಚಾಯಿತಿಯಿಂದ ವಿಶೇಷ ಗೌರವ



ಧೈರ್ಯದ ದಾರಿ

**ಸಿರವಾರ :** ಪಟ್ಟಣದ ಸೌಂದರ್ಯ ಮತ್ತು ಆರೋಗ್ಯವನ್ನು ಕಾಪಾಡುವಲ್ಲಿ ಮುಂಚೂಣಿಯಲ್ಲಿರುವ ಮಹಿಳಾ ಪೌರಕಾರ್ಮಿಕರನ್ನು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಇಂದು ಪಟ್ಟಣ ಪಂಚಾಯಿತಿ ಕಾರ್ಯಾಲಯದಲ್ಲಿ ಆತ್ಮೀಯವಾಗಿ ಸನ್ಮಾನಿಸಲಾಯಿತು.

**ಕಾರ್ಯಕ್ರಮದ ಮುಖ್ಯಾಂಶಗಳು:** ಪಟ್ಟಣ ಪಂಚಾಯಿತಿ ಆವರಣದಲ್ಲಿ ನಡೆದ ಈ ವಿಶೇಷ ಸಮಾರಂಭದಲ್ಲಿ, ಪಟ್ಟಣದಾದ್ಯಂತ ಶ್ರಮಿಸುವ ಎಲ್ಲಾ ಮಹಿಳಾ ಪೌರಕಾರ್ಮಿಕರಿಗೆ ಅಧಿಕಾರಿಗಳು ಹಾಗೂ ಪಟ್ಟಣ ಪಂಚಾಯತ್ ಅಧ್ಯಕ್ಷರಾದ ಹಾಜಿ ಚೌದರಿ ಮತ್ತು ಉಪಾಧ್ಯಕ್ಷೆಯಾದ ಲಕ್ಷ್ಮಿ ಅದೇಪ್ಪ ಗೌರವ ಸಲ್ಲಿಸಿದರು.

ಸನ್ಮಾನ: ಸ್ವಚ್ಛತಾ ಸಿಬ್ಬಂದಿಗೆ ಶಾಲು ಹೊದಿಸಿ, ಸ್ಮರಣಿಕೆ ನೀಡಿ ಮತ್ತು ಸಿಹಿ ಹಂಚುವ ಮೂಲಕ ಅವರ ಸೇವೆಯನ್ನು ಗುರುತಿಸಲಾಯಿತು.

**ಜಾಗೃತಿ:** ಕಾರ್ಯಕ್ರಮದಲ್ಲಿ ಮಹಿಳಾ ಹಕ್ಕುಗಳು ಮತ್ತು ಸಮಾಜದಲ್ಲಿ ಮಹಿಳೆಯರ ಸಾಧನೆಗಳ ಬಗ್ಗೆ ಅರಿವು ಮೂಡಿಸಲಾಯಿತು.

"ಮನೆ ಮತ್ತು ಸಮಾಜ ಎರಡನ್ನೂ ಸರಿದೂಗಿಸುವ ಶಕ್ತಿ ಮಹಿಳೆಗಿದೆ. ಪಟ್ಟಣದ ಆರೋಗ್ಯ ಕಾಪಾಡುವಲ್ಲಿ ನಮ್ಮ ಪೌರಕಾರ್ಮಿಕರ ಶ್ರಮಕ್ಕೆ ಬೆಲೆ ಕಟ್ಟಲಾಗದು."
ಕಿರಿಯ ಆರೋಗ್ಯ ನಿರೀಕ್ಷಕ ಅಧಿಕಾರಿಯಾದ ಸುನೀತಾ ಸಜ್ಜನ್ , ಪಟ್ಟಣ ಪಂಚಾಯಿತಿ.

**ಹೆಮ್ಮೆ ವ್ಯಕ್ತಪಡಿಸಿದ ಪೌರಕಾರ್ಮಿಕರು:** ಸನ್ಮಾನ ಸ್ವೀಕರಿಸಿ ಮಾತನಾಡಿದ ಮಹಿಳಾ ಪೌರಕಾರ್ಮಿಕರೊಬ್ಬರು, "ಪ್ರತಿದಿನ ಕೆಲಸದಲ್ಲಿ ತೊಡಗುವ ನಮಗೆ ಅಧಿಕಾರಿಗಳು ಇಂದು ಪ್ರೀತಿಯಿಂದ ಕರೆದು ಗೌರವಿಸಿದ್ದು ತುಂಬಾ ಸಂತೋಷ ತಂದಿದೆ. ಈ ಗೌರವ ನಮ್ಮ ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚಿಸಿದೆ," ಎಂದು ಹರ್ಷ ವ್ಯಕ್ತಪಡಿಸಿದರು.

## ಪ್ರತಿಯೊಬ್ಬ ವಿದ್ಯಾರ್ಥಿಗಳು ಉತ್ತಮ ನಾಯಕತ್ವ ಗುಣಗಳನ್ನು ಬೆಳಸಿಕೊಳ್ಳಿ: ರಾಮಕೃಷ್ಣ ನಾಯಕ ಕರಡಿಗುಡ್ಡ

ಧೈರ್ಯದ ದಾರಿ



**ಮಾನ್ವಿ:** ರಾಷ್ಟ್ರೀಯ ಸೇವಾ ಯೋಜನೆಯ ಉದ್ದೇಶ ಪ್ರತಿಯೊಬ್ಬರು ರಾಷ್ಟ್ರೀಯ ಸೇವಾ ಮನೋಭಾವ ನೆಗಳನ್ನು ಬೆಳಸಿಕೊಳ್ಳಬೇಕು ಎಂದು ರಾಮಕೃಷ್ಣ ನಾಯಕ ಹೇಳಿದರು.ತಾಲೂಕಿನ ಕರಡಿಗುಡ್ಡ ಗ್ರಾಮದಲ್ಲಿ ಶ್ರೀ ವೆಂಕಟೇಶ್ವರ ಪದವಿ ಮಹಾವಿದ್ಯಾಲಯದ ಸಂಯುಕ್ತಾಶ್ರಯದಲ್ಲಿ ನಡೆದ ರಾಷ್ಟ್ರೀಯ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ ಸಮಾರಂಭ ಕಾರ್ಯಕ್ರಮದಲ್ಲಿ ರಾಮಕೃಷ್ಣ ನಾಯಕ ಕರಡಿಗುಡ್ಡ ಮಾಜಿ ಅಧ್ಯಕ್ಷರು ಗ್ರಾಮ ಪಂಚಾಯತಿ ಸಂಗಾಪುರ ಉದ್ಘಾಟಿಸಿ ಮಾತನಾಡಿ ವಿದ್ಯಾರ್ಥಿಗಳು ಉತ್ತಮವಾಗಿ ಅಭ್ಯಾಸ ಮಾಡಿ ಯಾವುದೇ ದುಶ್ಚಟಗಳಿಗೆ ಬಲಿಯಾಗಬೇಡಿ ಎಂದುಹೇಳಿದರು. ಕಾರ್ಯಕ್ರದ ಮುಖ್ಯ ಅತಿಥಿಗಳಾದ ಭೀಮೇಶ ನಾಯಕ ಕರಡಿಗುಡ್ಡ ಮಾತನಾಡಿ ಗಾಂಧೀಜಿವರ ಕನಸು ನನಸಾಗಬೇಕಾದರೆ ಗ್ರಾಮಗಳು ಉದ್ದಾರವಾದಾಗ ದೇಶ ಉದ್ದಾರವಾಗಲು ಸಾಧ್ಯವಾಗುತ್ತದೆ ಎಂದು ಹೇಳಿದರು.ಇನ್ನೋರ್ವ ಮುಖ್ಯ ಅತಿಥಿಯಾದ ಟಿ. ಹನುಮೇಶ ನಾಯಕ ಕರಡಿಗುಡ್ಡ ಮಾತನಾಡಿ ಒಂದನೇ ತರಗತಿಯಿಂದ ಹತ್ತನೇ ತರಗತಿ ಹಂತ ಬೆಕ್ಕಿನ ಆಟ ಇದ್ದ ಹಾಗೆ,ಹನ್ನೊಂದರಿಂದ ಹನ್ನೆರಡನೆಯ ತರಗತಿಯ ವಿದ್ಯಾರ್ಥಿಗಳ ಹಂತ ಎನ್ನುವುದು ಮಂಗನ ಆಟ ಇದ್ದ ಹಾಗೇ ಹಾಗೂ ಪದವಿ ವಿದ್ಯಾರ್ಥಿಗಳ ಹಂತ ಎನ್ನುವುದು ಕೋಳಿ ಹಂತ ಇದ್ದ ಹಾಗೆ ಎಂದು ಹೇಳಿದರು.ಕಾಲೇಜಿನ ಪ್ರಾಚಾರ್ಯರಾದ ಶಂಕ್ರಪ್ಪ ನಕ್ಕುಂದಿಯವರು ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೃಷ್ಣವದೂತ ಪ್ರಾಚಾರ್ಯರು ನಮ್ಮ ಮಾನ್ವಿ ಪದವಿ ಪೂರ್ವ ಕಾಲೇಜ ಮಾನ್ವಿಯವರು ವಹಿಸಿ ಮಾತನಾಡಿ ರಾಷ್ಟ್ರೀಯ ಸೇವಾ ಯೋಜನೆಯಿಂದ ನಾಯಕತ್ವ ಗುಣಗಳನ್ನು ಬೆಳಸಿಕೊಳ್ಳಲು ಸಹಕಾರಿಯಾಗುತ್ತದೆ ಎಂದು ಹೇಳಿದರು.ರಾಷ್ಟ್ರೀಯ ಸೇವಾ ಯೋಜನೆಯ ಅಧಿಕಾರಿಗಳಾದ ಆಂಜನೇಯ ನಸಲಾಪುರ ವರದಿ ವಾಚನ ಮಾಡಿದರು.

ಈ ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯರಾದ ಶಂಕರಪ್ಪ ಅಂಗಡಿ, ಚಂದ್ರಶೇಖರ್ ಎಚ್ ಸಹಾಯಕ ಪ್ರಾಧ್ಯಾಪಕರು, ಶೈಲಜಾ, ಸೇರಿದಂತೆ ಕಾಲೇಜಿನ ಉಪನ್ಯಾಸಕರು ಮತ್ತು ಶಿಬಿರಾರ್ಥಿಗಳು ಗ್ರಾಮಸ್ಥರು ಭಾಗವಹಿಸಿದ್ದರು. ಏನ್.ಎಸ್.ಎಸ್ ಗೀತೆಯನ್ನು ಸ್ನೇಹಾ ಸಂಗಡಿಗರು ಹಾಡಿದರು. ಅಂಬಣ್ಣ ನಾಯಕ ಉಪನ್ಯಾಸಕರು ನಿರೂಪಿಸಿದರು, ಆಫ್ರಿನಾ ಉಪನ್ಯಾಸಕಿ ಸ್ವಾಗತಿಸಿದರು, ಶರಣಬಸವ ಕರಡಿಗುಡ್ಡ ವಂದಿಸಿದರು.

## ಕ್ಷಯರೋಗ ಪತ್ತೆಗೆ ಹ್ಯಾಂಡ್‌ಹೆಲ್ಡ್ ಎಕ್ಸ್–ರೇ ಯಂತ್ರಗಳ ಬಳಕೆ ಪರಿಣಾಮಕಾರಿ: ಡಿಎಚ್‌ಓ ಡಾ.ಸುರೇಂದ್ರ ಬಾಬು



ಧೈರ್ಯದ ದಾರಿ

**ರಾಯಚೂರು ಮಾ,12–**ಕ್ಷಯರೋಗ ತಡೆಗೆ ಕಫ ಪರೀಕ್ಷೆ ಹಾಗೂ ಆಸ್ಪತ್ರೆಗಳಲ್ಲಿ ಎಕ್ಸ್–ರೆ ಮೇಷಿನ್ ಮೂಲಕ ಪರೀಕ್ಷೆ ಮಾಡುವ ಜೊತೆಜೊತೆಗೆ ದೂರದ ಸ್ಥಳಗಳು ಅಥವಾ ಕೊಳಚೆ ಪ್ರದೇಶದ ಜನತೆಯು ಪರೀಕ್ಷೆಗೆ ಬರಲು ಅನಾನೂಕೂಲತೆಯನ್ನು ತಡೆಯಲು ದುರ್ಗಮ ಪ್ರದೇಶಗಳಲ್ಲಿ ಸಮುದಾಯದೊಂದಿಗೆ ಸ್ಥಳದಲ್ಲಿಯೇ ವಿಕಿರಣ ಚಿತ್ರಣ ( ಎಕ್ಸ್–ರೇ ) ಪ್ರತಿಯನ್ನು ಒದಗಿಸುವ ಮೂಲಕ ಕ್ಷಯರೋಗ (ಟಿಬಿ) ಪತ್ತೆಯಲ್ಲಿ ಕ್ರಾಂತಿಯನ್ನುಂಟು ಮಾಡುವ ಹ್ಯಾಂಡ್‌ಹೆಲ್ಡ್ ಸಾಧನದ ಬಳಕೆಯನ್ನು ಪರಿಣಾಮಕಾರಿಯಾಗಿಸಲು ಯಾವುದೇ ಮಾಹಿತಿಯ ಕೊರತೆಯಾಗದಂತೆ ತರಬೇತಿ ಪಡೆಯಿರಿ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದಡಿ ಜಿಲ್ಲೆಯ ರೇಡಿಯಾಲಜಿ ಇಮೇಜಿಂಗ್ ಅಧಿಕಾರಿ, ಎಸ್‌ಟಿಎಸ್ ಹಾಗೂ ಎಸ್‌ಟಿಎಲ್‌ಎಸ್ ಅವರಿಗೆ ಮಾರ್ಚ 12ರಂದು ಹಮ್ಮಿಕೊಂಡಿದ್ದ ಹ್ಯಾಂಡ್‌ಹೆಲ್ಡ್ ಎಕ್ಸ್–ರೇ ಮೆಷಿನ್ ಬಳಕೆಯ ತರಬೇತಿ ಶಿಬಿರದಲ್ಲಿ ಅವರು ಮಾತನಾಡಿ, ಜಿಲ್ಲೆಯ ಜನತೆಯ ಅನುಕೂಲಕ್ಕಾಗಿ ಎಲ್ಲ ತಾಲೂಕುಗಳಲ್ಲಿ ಜಿಲ್ಲೆಯ ಜನತೆಯು ಪರೀಕ್ಷೆಗಾಗಿಯೇ ಆಸ್ಪತ್ರೆಗಾಗಿ ಬರುವ ಸಮಯ, ಸಾರಿಗೆ ವೆಚ್ಚವನ್ನು ಉಳಿಸಿ ಸಮುದಾಯದ ಹತ್ತಿರವೇ ಹೋಗಿ ಶಂಕೀತರನ್ನು ಪರೀಕ್ಷೆ ಮಾಡಲು ಅತ್ಯುಪಯುಕ್ತವಾಗುವ ಉಪಕರಣ ಇದಾಗಿದ್ದು, ತ್ವರಿತ ರೋಗ ಪತ್ತೆಗೆ ಸಹಕಾರಿಯಾಗಿರುವ ಹ್ಯಾಂಡ್‌ಹೆಲ್ಡ್ ಎಕ್ಸ್–ರೇ ಮೆಷಿನ್ ಸದ್ಭಳಕೆಯಾಗಿಸಿ ಎಂದು ತಿಳಿಸಿದರು.

ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಮಹಮ್ಮದ್ ಶಾಕೀರ್ ಮಾತನಾಡಿ, ಈ ಮೆಷಿನ್ ಮೂಲಕ ಪರೀಕ್ಷೆ ಕೈಗೊಂಡ ನಂತರ ಸ್ಥಳದಲ್ಲಿಯೇ ವರದಿಯನ್ನು ನೀಡಲಾಗುವ ವ್ಯವಸ್ಥೆಯಿದ್ದು, ಕ್ಷಯರೋಗದ ಶಂಕೀತ ವರದಿಗಳು ಕಂಡು ಬಂದಲ್ಲಿ ಅಂತವರಿಗೆ ಒಂದು ಬಾರಿ ಕಫ ಪರೀಕ್ಷೆ ಮಾಡಿಸಿ ಖಚಿತಪಡಿಸಿಕೊಂಡು ವೈದ್ಯರ ಸಲಹೆಯಂತೆ ಚಿಕಿತ್ಸೆ ಆರಂಭಿಸಲಾಗುವುದು ಎಂದರು. ಗ್ರಾಮೀಣ ಪ್ರದೇಶದ ಹಳ್ಳಿಗಳು, ಕೊಳೆಗೇರಿಗಳು ಅಥವಾ ಸಂಚಾರಿ ಆರೋಗ್ಯ ಚಿಕಿತ್ಸಾಲಯಗಳಿಗೆ ಸುಲಭವಾಗಿ ಹ್ಯಾಂಡ್‌ಹೆಲ್ಡ್ ಎಕ್ಸ್–ರೇ ಮೆಷಿನ್ ಸಾಗಿಸಬಹುದು.

ಅನ್ಯ ಕಾಯಿಲೆಯಿಂದ ಬಳಲುವ ವ್ಯಕ್ತಿಗಳಿಗೆ ಅವರ ಬಳಿಯೇ ತೆರಳಿ ಪ್ರಕರಣ ಪತ್ತೆ ಹಚ್ಚಲು ಸಹಕಾರಿಯಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲಾ ಅರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಮ್ ಎನ್., ಜಿಲ್ಲಾ ಸರ್ವೆಕ್ಷಣಾಧಿಕಾರಿ ಡಾ. ಗಣೇಶ್ ಕೆ., ಡಿಪಿಡಿಓ ಡಾ ಚಂದ್ರಶೇಖರ ಸ್ವಾಮಿ, ಎನ್‌ಪೋರ್ಸಮೆಂಟ್ ಅಧಿಕಾರಿ ಡಾ.ಶಿವಕುಮಾರ ನಾರಾ ಹಾಗೂ ಜಿಲ್ಲಾ ಕಾರ್ಯಕ್ರಮ ಸಂಯೋಜಕ ಅಮರೇಶ ಕುಮಾರ್ ಸೇರಿದಂತೆ ಕ್ಷಯರೋಗ ವಿಭಾಗದ ಸಿಬ್ಬಂದಿ ಉಪಸ್ಥಿತರಿದ್ದರು.

## ವಿದ್ಯಾರ್ಥಿ ಜೀವನದಲ್ಲಿ ಶಿಸ್ತು ಮತ್ತು ಸಂಸ್ಕೃತಿ ಅತಿ ಮುಖ್ಯ: ಪಿ. ಬಸವರಾಜ್ ನಾಯಕ



ಧೈರ್ಯದ ದಾರಿ

**ಸಿರವಾರ:** "ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆಯಲು ಕೇವಲ ಜ್ಞಾನವಿದ್ದರೆ ಸಾಲದು, ಅದರ ಜೊತೆಗೆ ಶಿಸ್ತು, ವಿವೇಕ, ಸಮಯ ಪಾಲನೆ ಹಾಗೂ ಉತ್ತಮ ಸಂಸ್ಕೃತಿಯನ್ನು ಮೈಗೂಡಿಸಿಕೊಳ್ಳುವುದು ಅತ್ಯಗತ್ಯ," ಎಂದು ಮಾಡಗಿರಿ ಸರ್ಕಾರಿ ಪ್ರೌಢಶಾಲೆಯ ದೈಹಿಕ ಶಿಕ್ಷಕ ಪಿ. ಬಸವರಾಜ್ ನಾಯಕ ತಿಳಿಸಿದರು.

ತಾಲೂಕಿನ ಮಾಡಗಿರಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಆಯೋಜಿಸಲಾಗಿದ್ದ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಹಾಗೂ ಸರಸ್ವತಿ ಪೂಜೆ ಸಮಾರಂಭದಲ್ಲಿ ಅವರು ಮಾತನಾಡಿದರು.

**ಗುರಿ ಮತ್ತು ಸಾಧನೆ:** ಮಕ್ಕಳು ಈ ದೇಶದ ಭವಿಷ್ಯ. ವಿದ್ಯಾರ್ಥಿಗಳು ಜೀವನದಲ್ಲಿ ಸ್ಪಷ್ಟ ಗುರಿ ಇಟ್ಟುಕೊಂಡು, ಅದನ್ನು ಮುಟ್ಟುವ ಪ್ರಾಮಾಣಿಕ ಪ್ರಯತ್ನ ಮಾಡಬೇಕು. ವಿದ್ಯಾರ್ಥಿಗಳು ಉನ್ನತ ಸ್ಥಾನಕ್ಕೇರಿದಾಗ ಶಿಕ್ಷಕರಿಗೆ ದೊರೆಯುವ ಸಂತೋಷವೇ ಅಪಾರ ಎಂದು ನಾಯಕ ಅವರು ಕಿವಿಮಾತು ಹೇಳಿದರು.

**ಅಧ್ಯಕ್ಷೀಯ ನುಡಿ:** ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಖ್ಯ ಶಿಕ್ಷಕ ಬಿ. ರಾಜಾಖಾನ್ ಮಾತನಾಡಿ, "ವಿದ್ಯಾರ್ಥಿಗಳು ಹೊಸತನದ ಆವಿಷ್ಕಾರದೊಂದಿಗೆ ಪ್ರಜ್ಞಾವಂತರಾಗಿ ಬಾಳಬೇಕು. ಸಕಾರಾತ್ಮಕ ವಿಚಾರಗಳನ್ನು ಅಳವಡಿಸಿಕೊಂಡು, ಹಿರಿಯರು ತೋರಿಸಿದ ದಾರಿಯಲ್ಲಿ ಸಾಗುವ ಮೂಲಕ ಬದುಕುವ ಕಲೆಯನ್ನು ರೂಢಿಸಿಕೊಳ್ಳಬೇಕು," ಎಂದರು.

**ಅನಿಸಿಕೆ ವಿನಿಮಯ:** ಬೀಳ್ಕೊಡುಗೆಯ ಸಂದರ್ಭದಲ್ಲಿ 10ನೇ ತರಗತಿಯ ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಶಾಲಾ ಜೀವನದ ತಮ್ಮ ನೆನಪು ಹಾಗೂ ಅನಿಸಿಕೆಗಳನ್ನು ಹಂಚಿಕೊಂಡರು.

ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕ ವೃಂದ, ಪೋಷಕರು ಹಾಗೂ ನೂರಾರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಮೊದಲನೇ ಪುಟದಿಂದ

# ಗ್ರಾಮೀಣ ಮಹಿಳೆಯರ ಉತ್ಪನ್ನಗಳಿಗೆ ಸಂಜೀವಿನಿ ಇ-ಮಾರ್ಟ್ ಉತ್ತೇಜನ: ತಾ.ಪಂ ಇಒ ಖಾಲೀದ್ ಅಹ್ಮದ್

ಮಾರುಕಟ್ಟೆ ದೊರೆಯುವುದರಿಂದ ಗ್ರಾಮೀಣ ಆರ್ಥಿಕತೆಯೂ ಚೇತರಿಸಿಕೊಳ್ಳಲಿದೆ. ಮಹಿಳಾ ಸಂಘಗಳಿಗೆ ನೀಡಲಾದ ಈ ಜವಾಬ್ದಾರಿ ಅವರ ಸಾಮರ್ಥ್ಯವನ್ನು ತೋರಿಸುವುದರ ಜೊತೆಗೆ ಸಮಾಜದ ಅಭಿವೃದ್ಧಿಯಲ್ಲಿಯೂ ಪ್ರಮುಖ ಪಾತ್ರ ವಹಿಸುತ್ತದೆ ಎಂದರು.

ಇದೇ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಮ್ಯಾನೇಜರ್ ಬಸವರಾಜ, ಎನ್.ಆರ್.ಎಲ್.ಎಮ್ ವಲಯ ಮೇಲ್ವಿಚಾರಕ ಶರಣು ಬಸವ, ಕೃಷಿಯೇತರ ವ್ಯವಸ್ಥಾಪಕ ಮಹಾಂತೇಶ, ಐ.ಎಫ್.ಸಿ ಸಂಯೋಜಕ ವಿನೋದ್, ಡಿಇಒ ಬಸವರಾಜ, ವೈಪಿ ಕಲ್ಪನಾ, ತಾಲೂಕು ಮಟ್ಟದ ಸಂಪನ್ಮೂಲ ವ್ಯಕ್ತಿ ರುದ್ರಮ್ಮ, ಚನ್ನಬಸ್ಸಮ್ಮ, ತಾಲೂಕು ಪಂಚಾಯಿತಿ ಸಿಬ್ಬಂದಿಗಳು, ಒಕ್ಕೂಟದ ಪದಾಧಿಕಾರಿಗಳು, ಶ್ರೀನಿಧಿ ಸ್ವ-ಸಹಾಯ ಸಂಘ ಮಹಿಳೆಯರ ಹಾಗೂ ಒಕ್ಕೂಟದ ಸಿಬ್ಬಂದಿಗಳು ಹಾಜರಿದ್ದರು.

# ಗ್ರಂಥಾಲಯದಲ್ಲಿ ಚಹಾ, ಬಿಸ್ಕೆಟ್ ವ್ಯವಸ್ಥೆಗೆ ಜಿಲ್ಲಾ ಪಂಚಾಯತ್ ಸಿಇಓ ಈಶ್ವರ ಕಾಂದೂ ಸೂಚನೆ

ಧೈರ್ಯದ ದಾರಿ

**ರಾಯಚೂರು ಮಾ,12**–ಎಸ್.ಎಸ್.ಎಲ್.ಸಿ ಸೇರಿದಂತೆ ಬೇರೆ ಬೇರೆ ಪರೀಕ್ಷೆಗಳಿಗೆ ಸಿದ್ದತೆ ಮಾಡಿಕೊಳ್ಳುವ ಜಿಲ್ಲೆಯ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗ ಗ್ರಂಥಾಲಯಗಳಲ್ಲಿ ಸಂಜೆ ವೇಳೆ ಪ್ರತಿ ದಿನ ಚಹಾ ಮತ್ತು ಬಿಸ್ಕೆಟ್ ವ್ಯವಸ್ಥೆ ಮಾಡಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ಸುತ್ತೋಲೆ ಹೊರಡಿಸಿ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳ ಗ್ರಂಥಪಾಲಕರಿಗೆ ನಿರ್ದೇಶನ ನೀಡಿದ್ದಾರೆ.

ಇದೇ ತಿಂಗಳು 18 ರಿಂದ ಎಸ್ಸೆಸ್ಸೆಲ್ಸಿ ಪರೀಕ್ಷೆಗಳು ಆರಂಭವಾಗಲಿದ್ದು, ಗ್ರಾಮ ಪಂಚಾಯತಿ ವ್ಯಾಪ್ತಿಯ ವಿದ್ಯಾರ್ಥಿಗಳು ಪರೀಕ್ಷೆಗೆ ತಯಾರಿ ಮಾಡಿಕೊಳ್ಳಲು ಉತ್ತಮ ಓದುವ ವಾತಾವರಣದ ಅವಶ್ಯಕತೆ ಇದೆ. ಈ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯತಿ ಗ್ರಂಥಾಲಯಗಳು ವಿದ್ಯಾರ್ಥಿಗಳಿಗೆ ಉಪಯುಕ್ತವಾಗುವಂತೆ ಕಾರ್ಯನಿರ್ವಹಿಸಬೇಕು.

ಪರೀಕ್ಷೆ ಬರೆಯುತ್ತಿರುವ ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಟಿಯಿಂದ ಗ್ರಾಮ ಪಂಚಾಯತಿ ಗ್ರಂಥಾಲಯಗಳ ಸಮಯ ಬದಲಾವಣೆ ಹಾಗೂ ಅಭ್ಯಾಸ ಮಾಡಲು ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು. ಗ್ರಾಮ ಪಂಚಾಯತಿ ಗ್ರಂಥಾಲಯಗಳ ಕಾರ್ಯ ಸಮಯವನ್ನು ಪ್ರಸ್ತುತ ಇರುವ ಬೆಳಿಗ್ಗೆ 9.00 ರಿಂದ ಸಂಜೆ 6.30 ರವರೆಗೆ ಇರುವ ಸಮಯದ ಹೊರತಾಗಿ, ವಿದ್ಯಾರ್ಥಿಗಳ ಓದುವ ಅವಧಿಯನ್ನು ಗಮನದಲ್ಲಿಟ್ಟುಕೊಂಡು ವಿದ್ಯಾರ್ಥಿಗಳಿಗೆ ಶಾಂತವಾದ ಮತ್ತು ಅನುಕೂಲಕರ ವಾತಾವರಣದಲ್ಲಿ ಓದಲು ಅವಕಾಶ ಕಲ್ಪಿಸುವುದು. ಗ್ರಾಮ ಪಂಚಾಯತಿಗಳು ವಿಶೇಷ ಕಾಳಜಿ ವಹಿಸಿ ಗ್ರಂಥಾಲಯಗಳಲ್ಲಿ ಸ್ವಚ್ಛತೆ, ಸಮರ್ಪಕ ಬೆಳಕು ಹಾಗೂ ಕುಳಿತುಕೊಳ್ಳುವ ವ್ಯವಸ್ಥೆಗಳನ್ನು ಕಲ್ಪಿಸಿ ವಿದ್ಯಾರ್ಥಿಗಳಿಗೆ ಓದಲು ಅನುಕೂಲವಾಗುವಂತೆ ನೋಡಿಕೊಳ್ಳಬೇಕು.

ಗ್ರಂಥಾಲಯದಲ್ಲಿ ಸಂಜೆಯಿಂದ ರಾತ್ರಿಯವರೆಗೆ ಓದುತ್ತಿರುವ ವಿದ್ಯಾರ್ಥಿಗಳಿಗೆ ಉತ್ತೇಜನ ನೀಡುವ ಉದ್ದೇಶದಿಂದ ಗ್ರಾಮ ಪಂಚಾಯತಿ ಸ್ವಂತ ಸಂಪನ್ಮೂಲಗಳಿಂದ ಸಂಜೆ ಟೀ ಮತ್ತು ಬಿಸ್ಕೆಟ್ ವ್ಯವಸ್ಥೆ ಮಾಡಬೇಕು.

ಈ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲಾ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯತಿಗಳಲ್ಲಿ ಮೇಲ್ಕಂಡ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಸಹಕಾರಿಯಾಗುವಂತೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಸುತ್ತೋಲೆಯಲ್ಲಿ ಜಿ.ಪಂ ಸಿಇಓ ಅವರು ಸೂಚಿಸಿದ್ದಾರೆ.

# ಸಾಮಾಜಿಕ, ಆರ್ಥಿಕ ಬದಲಾವಣೆಯ ಅಧ್ಯಯನ ಸಂಸ್ಥೆಯಲ್ಲಿ 371ಜೆ ಮೀಸಲಾತಿ ಅಳವಡಿಕೆ ಪ್ರಕ್ರಿಯೆ ಜಾರಿಯಲ್ಲಿದೆ: ಡಾ.ಎಂ.ಸಿ.ಸುಧಾಕರ

ಧೈರ್ಯದ ದಾರಿ

**ರಾಯಚೂರು ಮಾ,12**– ಬೆಂಗಳೂರಿನ ಸಾಮಾಜಿಕ ಹಾಗೂ ಆರ್ಥಿಕ ಬದಲಾವಣೆಯ ಅಧ್ಯಯನ ಸಂಸ್ಥೆಯು 371ಜೆ ಅಡಿಯಲ್ಲಿ ರಾಜ್ಯಮಟ್ಟದ ಸಂಸ್ಥೆಯ ವ್ಯಾಪ್ತಿಗೆ ಒಳಪಡುತ್ತದೆ. ಈ ಸಂಸ್ಥೆಯಲ್ಲಿ 371ಜೆ ಮೀಸಲಾತಿ ಅಳವಡಿಸುವ ಪ್ರಕ್ರಿಯೆ ಜಾರಿಯಲ್ಲಿದೆ ಎಂದು ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ.ಸುಧಾಕರ್ ಅವರು ತಿಳಿಸಿದ್ದಾರೆ.

ರಾಯಚೂರು ಜಿಲ್ಲೆಯ ಸಿಂಧನೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ ಅವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 921ಕ್ಕೆ ಕರ್ನಾಟಕ ವಿಧಾನಸಭೆಯಲ್ಲಿ ಮಾರ್ಚ 12ರಂದು ಲಿಖಿತ ಉತ್ತರ ನೀಡಿರುವ ಸಚಿವರು, ಸಾಮಾಜಿಕ ಹಾಗೂ ಆರ್ಥಿಕ ಬದಲಾವಣೆಯ ಅಧ್ಯಯನ ಸಂಸ್ಥೆಯಲ್ಲಿ ಬೋಧಕೇತರ ಸಿಬ್ಬಂದಿಗಳ ನೇಮಕಾತಿಯ 371ಜೆ ಮೀಸಲಾತಿಗೆ ಸಂಬಂಧಿಸಿದಂತೆ ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆಯ ಅಧ್ಯಯನ ಸಂಸ್ಥೆಯು ಸಮಿತಿಯನ್ನು ರಚಿಸಿಕೊಂಡಿದ್ದು, ಈ ಸಮಿತಿಯು ಮಾಡುವ ಶಿಫಾರಸ್ಸುಗಳನ್ನೊಳಗೊಂಡ ಪ್ರಸ್ತಾವನೆಯನ್ನು ನಿರೀಕ್ಷಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಈ ಸಂಸ್ಥೆಗೆ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳಿಂದ ಶೇ.45:50 ಅನುಪಾತದಲ್ಲಿ ವೇತನುದಾನ ಮಂಜೂರು ಮಾಡಲಾಗುತ್ತಿದೆ. ಬಾಕಿ ಶೇ.5ರಷ್ಟು ಅನುದಾನವನ್ನು ಸಂಸ್ಥೆಯು ತನ್ನ ಸ್ವಂತ ಸಂಪನ್ಮೂಲದಿಂದ ಭರಿಸುತ್ತಿದೆ. ಈ ಸಂಸ್ಥೆಗೆ ಪ್ರಾಧ್ಯಾಪಕರ ಹುದ್ದೆಗಳು, ಸಹ ಪ್ರಾಧ್ಯಾಪಕರ ಹುದ್ದೆಗಳು ಮತ್ತು ಸಹಾಯಕ ಪ್ರಾಧ್ಯಾಪಕರ ಹುದ್ದೆಗಳು ಮಂಜೂರಾಗಿವೆ. ಈ ಸಂಸ್ಥೆಯಲ್ಲಿ ನೇಮಕಾತಿಗಳನ್ನು ಸರ್ಕಾರದ ನಿಯಮಗಳಂತೆ ನಡೆಸಲಾಗುತ್ತದೆ ಎಂದು ಸಚಿವರು ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

# ಮಾರ್ಚ್ 14ರಂದು ರಾಯಚೂರು ನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯ

**ರಾಯಚೂರು ಮಾ,12**–ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ–2ರ ವ್ಯಾಪ್ತಿಯಲ್ಲಿ ಹಳೆ ವಿದ್ಯುತ್ ಕಂಬಗಳ ಬದಲಾವಣೆ ಕಾಮಗಾರಿ ಕೈಗೊಳ್ಳುತ್ತಿರುವ ಪ್ರಯುಕ್ತ ಮಾರ್ಚ್ 14ರ ಬೆಳಿಗ್ಗೆ 11ರಿಂದ ಸಂಜೆ 4ರವರಗೆ ನಗರದ ವಿವಿಧ ಕಡೆ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.

ಅಂದು ಬೆಳಿಗ್ಗೆಯಿಂದ ಸಿಟಿ ಟಾಕೀಸ್ ರೋಡ್, ಮಾಂಗಳ್ಯ, ಸಿ.ಎಮ್.ಆರ್ ಶಾಂಪಿಂಗ್ ಮಾಲ್, ಗಾಂಧಿ ಚೌಕ್, ಮಹಾವೀರ್ ಚೌಕ್, ಮಹಾಳೇಶ್ವರ ವೃತ್ತ, ಕುಂಬಾರ್ ಓನಿ, ಮಕ್ತಲ ಪೇಟೆ, ಮದ್ದಿಪೇಟೆ, ವಡ್ಡೆಪ್ಪ ಜಿನ್ಮ, ಸುರಕ್ಷ ಆಸ್ಪತ್ರೆ, ಬ್ರೆಸ್ತವಾರ ಪೇಟೆ (ಪಿಂಜಾರ್ ವಾಡಿ), ಗೋಶಾಲ ರಸ್ತೆ, ಅರಬ್ ಮೊಹಲ್ಲಾ, ಸಿಯಾತಲಾಬ, ಆಟೋ ನಗರ, ಶಿವಂ ಆಸ್ಪತ್ರೆ, ಜಿಲ್ಲಾ ಅಗ್ನಿ ಶಾಮಕ ಕಚೇರಿ, ಜಿಲ್ಲಾ ಪಂಚಾಯತಿ, ಗಂಜ್ ರಸ್ತೆ ಯಿಂದ ಬಸವನ ಬಾವಿ, ಜಿಲ್ಲಾ ಅರಣ್ಯ ಕಚೇರಿಯ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ 24*7 ಗ್ರಾಹಕರ ಸೇವಾ ಕೇಂದ್ರದ ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾತರಕಿ ಯುವಬಳಗ ವತಿಯಿಂದ ಶ್ರೀಶೈಲ ಅನ್ನದಾಸೋಹಕ್ಕಾಗಿ 40 ಪ್ಯಾಕೇಟ್ ಅಕ್ಕಿ ಸೇವೆ




ಧೈರ್ಯದ ದಾರಿ

**ಮಾನ್ವಿ:** ತಾಲೂಕಿನ ಕಾತರಕಿ ಗ್ರಾಮದ ಕಾತರಕಿ ಯುವಬಳಗ ವತಿಯಿಂದ ಶ್ರೀಶೈಲದಲ್ಲಿ ಯುಗಾದಿ ಅಂಗವಾಗಿ ನಡೆಯಲಿರುವ ಶ್ರೀ ಶೈಲ ಮಲ್ಲಿಕಾರ್ಜುನ ಸ್ವಾಮಿ ಜಾತ್ರ ಮಹೋತ್ಸವದ ಅಂಗವಾಗಿ ಶ್ರೀಶೈಲದಲ್ಲಿನ ಶ್ರೀ ವೀರಭದ್ರೇಶ್ವರ ಭಿಕ್ಷಾವರ್ತಿ ಮಠದಲ್ಲಿ ನಡೆಯುವ ಅನ್ನದಾಸೋಹಕ್ಕಾಗಿ 25 ಕೇಜಿಯ 40 ಪ್ಯಾಕೇಟ್ ಅಕ್ಕಿಯನ್ನು ಕಳುಹಿಸಿ ಕೊಡಲಾಯಿತು.

ಕಾತರಕಿ ಯುವಬಳಗದ ಮಹೇಶಗೌಡ, ರಮೇಶಹೂಗಾರ, ವೆಂಕಟೇಶ, ರಾಮಲಿಂಗಪ್ಪ, ಸಿದ್ದನಗೌಡ, ಕುಮಾರ,ರಮೇಶ್ ಅಗಸಿ, ಕಾಶಿಂ ಅಲಿ, ಮೌನೇಶ್ ನಾಯಕ, ವೀರೇಶ ಮಡಿವಾಳ,ನರಸಪ್ಪ ತಲ್ಮಾರಿ, ಸುರೇಶ ಹೆಚ್.ಲಕ್ಷ್ಮಣ ವಿನಯ್ ಸೇರಿದಂತೆ ಗ್ರಾಮದ ಭಕ್ತರು ಇದ್ದರು.

# ತಾಳಿಕೋಟೆ ತಾಲೂಕಿನ ಪಡೇಕನೂರ ಗ್ರಾಮದಲ್ಲಿ ವಿವಿಧ ಕಾಮಗಾರಿ ಪರಿಶೀಲಿಸಿದ ಜಿಪಂ ಸಿಇಓ ರಿಷಿ ಆನಂದ



**ವಿಜಯಪುರ, ಮಾ.12:** ಪ್ರಗತಿ ಹಂತದಲ್ಲಿರುವ ಕಾಮಗಾರಿಗಳನ್ನು ಆದ್ಯತೆಯ ಮೇರೆಗೆ ಪೂರ್ಣಗೊಳಿಸಬೇಕು ಎಂದು ವಿಜಯಪುರ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ರಿಷಿ ಆನಂದ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ತಾಳಿಕೋಟೆ ತಾಲೂಕಿನ ಕೊಣ್ಣೂರ ಗ್ರಾಮ ಪಂಚಾಯತಿ ವ್ಯಾಪ್ತಿಯ ಪಡೇಕನೂರ ಗ್ರಾಮದ ಅಂಗನವಾಡಿಗೆ ಭೇಟಿ ನೀಡಿದ ಅವರು, ಅಂಗನವಾಡಿ ಸುತ್ತಮುತ್ತಲಿನ ಪರಿಸರ ಸ್ವಚ್ಛತೆ, ಮಕ್ಕಳ ಕಲಿಕಾ ಸಾಮರ್ಥ್ಯ ಗುಣಮಟ್ಟ ಹೆಚ್ಚಿಸಿ ಕಲಿಕೆಗೆ ಆದ್ಯತೆ ನೀಡಬೇಕು. ಅಡುಗೆ ಕೊಠಡಿ ಸ್ವಚ್ಚತೆಗೆ ನಿರಂತರ ಶುಚಿತ್ವ ಕಾಪಾಡಬೇಕು. ಸಿಬ್ಬಂದಿ ಹಾಗೂ ಮಕ್ಕಳ ಹಾಜರಾತಿ, ಮಕ್ಕಳ ಆರೋಗ್ಯ ತಪಾಸಣಾ ವರದಿ ಸೇರಿದಂತೆ ವಿವಿಧ ಮಾಹಿತಿ ದಾಖಲೆ ಪರಿಶೀಲನೆ ನಡೆಸಿದರು.

ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ವಿದ್ಯುತ್ ವ್ಯವಸ್ಥೆ, ಶೌಚಾಲಯ ಸೇರಿದಂತೆ ಎಲ್ಲ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವುದು ಮತ್ತು ಮಕ್ಕಳಿಗೆ ಸಮಯಾನುಸಾರ ಪೌಷ್ಠಿಕ ಆಹಾರ ವಿತರಣೆಗೆ ಕ್ರಮವಹಿಸಬೇಕು ಎಂದರು.

ಈಗಾಗಲೇ ಬೇಸಿಗೆ ಕಾಲ ಪ್ರಾರಂಭವಾಗಿದ್ದು, ಮಕ್ಕಳನ್ನು ನೆರಳಿನಲ್ಲಿಯೇ ಪಾಲನೆ ಮಾಡಬೇಕು ಎಂದು ಅಂಗನವಾಡಿ ಸಿಬ್ಬಂದಿಗೆ ಸೂಚನೆ ನೀಡಿದರು.

ಇದೇ ವೇಳೆ, ಪಡೇಕನೂರ ಗ್ರಾಮದ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯಕ್ಕೆ ಭೇಟಿ ನೀಡಿ, ಅಲ್ಲಿನ ವ್ಯವಸ್ಥೆಗಳ ಕುರಿತು ಪರಿಶೀಲನೆ ನಡೆಸಿದರು.

ಬಳಿಕ ಪಡೇಕನೂರ ಗ್ರಾಮಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ಕಾಮಗಾರಿಗಳು ನಿರ್ಮಾಣ ಮಾಡಲು ಬಾಕಿ ಇದ್ದ ಸ್ಥಳಗಳಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗಳು ಮತ್ತು ಪಡೇಕನೂರ ಗ್ರಾಮದಿಂದ ಕೊಣ್ಣೂರ ಗ್ರಾಮದವರೆಗೆ ಸಿಸಿ ರಸ್ತೆ ಕಾಮಗಾರಿಗಳ ನಿರ್ಮಾಣದ ಅವಶ್ಯಕತೆ ಕುರಿತು ಪರಿಶೀಲನೆ ಮಾಡಿದರು.

ನಂತರ ಪ್ರಗತಿ ಹಂತದಲ್ಲಿರುವ ಪಡೇಕನೂರ ಗ್ರಾಮದಿಂದ ಹಳ್ಳೂರ ಗ್ರಾಮದವರೆಗೆ ರಸ್ತೆ ನಿರ್ಮಾಣ ಕಾಮಗಾರಿ ಪರಿಶೀಲಿಸಿ, ನಿಗದಿತ ಅವಧಿಯಲ್ಲಿ ಆದ್ಯತೆಯ ಮೇರೆಗೆ ಕಾಮಗಾರಿಯನ್ನು ಪೂರ್ಣಗೊಳಿಸುವುದಕ್ಕೆ ಕ್ರಮವಹಿಸಬೇಕು ಮತ್ತು ಉತ್ತಮ ಗುಣಮಟ್ಟದ ಕಾಮಗಾರಿ ಅನುಷ್ಠಾನಗೊಳಿಸಬೇಕು ಎಂದು ಪಂಚಾಯತ್ ರಾಜ್ ಇಂಜನಿಯರಿಂಗ್ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಪಂಚಾಯತ್ ರಾಜ್ ಇಂಜನಿಯರಿಂಗ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರಾದ ವಿದ್ಯಾಧರ ನ್ಯಾಮಗೌಡ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಶಿವರಾಜ ನಾಯಕ, ಕಿರಿಯ ಅಭಿಯಂತರರಾದ ಸಂತೋಷ ಲಮಾಣಿ, ತಾಲೂಕ ಪಂಚಾಯತಿ ಸಿಬ್ಬಂದಿ, ಅಂಗನವಾಡಿ ಸಿಬ್ಬಂದಿ ಹಾಗೂ ಇತರರು ಉಪಸ್ಥಿತರಿದ್ದರು.

# ಧೂಮಪಾನ ನಿಷೇಧಕ್ಕೆ ಜನರ ಸ್ವಯಂ ಜಾಗೃತಿ ಅತ್ಯಗತ್ಯ: ಸಂತೋಷ ಬಂಡೆ




**ವಿಜಯಪುರ, ಮಾ. 12:** ಧೂಮಪಾನವು ಗಂಭೀರ ವ್ಯಸನವಾಗಿದ್ದು, ಇದು ವ್ಯಕ್ತಿಯ ಆರೋಗ್ಯ, ಸುತ್ತಲಿನ ಪರಿಸರದ ಮೇಲೆ ಹಾನಿಕಾರಕ ಪರಿಣಾಮ ಬೀರುತ್ತದೆ. ಧೂಮಪಾನ ಎಂದರೆ ದೇಹತ್ಯಾಗ ಎಂದರಿತುಕೊಂಡು ಆರೋಗ್ಯಕರ ಜೀವನಕ್ಕಾಗಿ ಎಲ್ಲರೂ ಧೂಮಪಾನದಿಂದ ದೂರವಿರುವುದು ಅತ್ಯಗತ್ಯ ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ಬುಧವಾರ ತಾಲೂಕಿನ ಹಿರೇರೂಗಿ ಗ್ರಾಮದ ಯುಬಿಎಸ್ ಶಾಲೆಯಲ್ಲಿ ಧೂಮಪಾನ ನಿಷೇಧ ದಿನದ ನಿಮಿತ್ತ ಹಮ್ಮಿಕೊಂಡ ಧೂಮಪಾನದ ದುಷ್ಪರಿಣಾಮ ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಧೂಮಪಾನವು ನಿಧಾನಗತಿಯ ವಿಷವಾಗಿದೆ. ಅದು ಶ್ವಾಸಕೋಶದ ಕ್ಯಾನ್ಸರ್, ಹೃದಯರಕ್ತನಾಳದ ಕಾಯಿಲೆ, ಪಾರ್ಶ್ವವಾಯು ಮತ್ತು ಉಸಿರಾಟದ ದೀರ್ಘಕಾಲದ ಸಮಸ್ಯೆಗಳಿಗೆ ಕಾರಣವಾಗಿದ್ದು, ಇದನ್ನು ತ್ಯಜಿಸಿ,ಉತ್ತಮ ಆರೋಗ್ಯ ಕಾಪಾಡಿಕೊಳ್ಳುವಲ್ಲಿ ಜನರ ಸ್ವಯಂ ಜಾಗೃತಿ ಅತ್ಯಗತ್ಯ ಎಂದು ಹೇಳಿದರು.

ಧೂಮಪಾನವು ಆರೋಗ್ಯಕ್ಕೆ ಮಾರಕ. 2022ರಲ್ಲಿ ಪ್ರಕಟವಾದ ವಿಶ್ವ ಆರೋಗ್ಯ ಸಂಸ್ಥೆಯ ವರದಿಯ ಪ್ರಕಾರ, ಸುಮಾರು 7 ಮಿಲಿಯನ್ ವ್ಯಕ್ತಿಗಳು ಜಾಗತಿಕವಾಗಿ ಧೂಮಪಾನದಿಂದ ಬಳಲುತ್ತಿದ್ದು, 1.2 ಮಿಲಿಯನ್ ಜನರು ಇತರರಿಂದ ಸೂಸುವ ಸಿಗರೇಟ್ ಹೊಗೆಯನ್ನು ಸೇವಿಸಿ, ಅನಾರೋಗ್ಯದಿಂದ ಬಳಲುತ್ತಿದ್ದಾರೆ ಎಂಬ ಅಂಕಿಅಂಶ ಮನುಕುಲದ ಆರೋಗ್ಯದ ಬದುಕಿಗೆ ಆತಂಕಕಾರಿಯಾಗಿದೆ ಎಂದು ಹೇಳಿದರು.

ಶಿಕ್ಷಕ ಎಸ್.ಎಸ್. ಅರಬ ಅಧ್ಯಕ್ಷತೆ ವಹಿಸಿ ಮಾತನಾಡಿ, ವಿಶ್ವದಾದ್ಯಂತ ಧೂಮಪಾನದಿಂದಾಗಿ ಲಕ್ಷಾಂತರ ಅಕಾಲಿಕ ಸಾವುಗಳು ಸಂಭವಿಸುತ್ತಿವೆ. ವ್ಯಕ್ತಿಯ ಆರೋಗ್ಯ, ಆರ್ಥಿಕ ಸ್ಥಿತಿ ಮತ್ತು ಮುಂದಿನ ಪೀಳಿಗೆಯ ಭವಿಷ್ಯಕ್ಕಾಗಿ ಧೂಮಪಾನ ನಿಷೇಧವನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಶಿಕ್ಷಕರಾದ ಎನ್.ಬಿ. ಚೌಧರಿ, ಎಸ್.ಪಿ. ಪೂಜಾರಿ, ಅತಿಥಿ ಶಿಕ್ಷಕಿ ಅಲ್ಪಿಯಾ ಅಂಗಡಿ ಸೇರಿದಂತೆ ಶಾಲಾ ಮಕ್ಕಳು ಪಾಲ್ಗೊಂಡಿದ್ದರು. ಇದೇ ಸಂದರ್ಭದಲ್ಲಿ ಮಕ್ಕಳು ಧೂಮಪಾನ ನಿಷೇಧದ ಜಾಗೃತಿಯ ಭಿತ್ತಿ ಚಿತ್ರಗಳನ್ನು ಪ್ರದರ್ಶಿಸಿದರು.

# ಡಾ. ವಿಜಯಲಕ್ಷ್ಮಿ ಬಾಳೇಕುಂದ್ರಿ, ಪ್ರೊ. ವಿಜಯಾ ಕೋರಿಶೆಟ್ಟಿಯವರಿಗೆ "ಸಬಲೆ " ಪ್ರಶಸ್ತಿ



**ವಿಜಯಪುರ, ಮಾ. 12:**ನಗರದ ಎಂ. ಎಸ್. ಜೆ. ಜೆ. ವಿ ಸಂಸ್ಥೆಯ ದಶಮಾನತ್ಸವದ ಅಂಗವಾಗಿ ನಾಲ್ಕು ಜನ ಮಹಿಳಾ ಸಾಧಕರಿಗೆ, ವಿಶ್ವ ಮಹಿಳಾ ದಿನಾಚರಣೆ 2026ರ " ಸಬಲೆ " ಪ್ರಶಸ್ತಿ ಹಾಗೂ ಕಸಗೂಡಿಸುವ ಪ್ರಾಮಾಣಿಕ ಮಹಿಳಾ ಪೌರಾಕಾರ್ಮಿಕರಿಗೆ, ಸ್ವಸಹಾಯ ಸಂಘದಿಂದ ಯಶಸ್ವಿ ಬದುಕು ಟ್ಟಿಕೊಂಡ ಮಹಿಳೆಯರನ್ನು ಸನ್ಮಾನಿಸುವದರೊಂದಿಗೆ, ನಾಟ್ಯ ಗಾಯನ ಸಾಂಸ್ಕೃತಿಕ ವೈಭವದ ಕಾರ್ಯಕ್ರಮವನ್ನು ಮಾ. 13ರಂದು ನಗರದ ಕಂದಗಲ್ಲ ಹನುಮಂತರಾಯ ರಂಗಮದಿರದಲ್ಲಿ ಬೆಳಿಗ್ಗೆ 10ಗಂಟೆಗೆ ನಡೆಯಲಿದೆ ಎಂದು ಸಂಸ್ಥೆಯ ಅಧ್ಯಕ್ಷ ಪ್ರೀತಿ ಮೋಹನ ಪತ್ತಾರ ತಿಳಿಸಿದರು. ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

2016ರಲ್ಲಿ ಪ್ರಾರಂಭವಾದ ಎಂ. ಎಸ್. ಜೆ. ಜೆ. ವಿ ಸಂಸ್ಥೆಯು 10ವರ್ಷಗಳ ಕಾಲ ಸಾಮಾಜಿಕವಾಗಿ, ಶೈಕ್ಷಣಿಕವಾಗಿ, ಸಾಂಸ್ಕೃತಿಕವಾಗಿ, ಸಾಹಿತ್ತಿ ಕವಾಗಿ ಹತ್ತು ಹಲವಾರು ಕಾರ್ಯಗಳನ್ನು ಮಾಡುವದರೊಂದಿಗೆ ಕರೋಣಾ ಸಂದರ್ಭದಲ್ಲಿ ಅನಾಥರಿಗೆ ಅನ್ನ ನೀರು ನೀಡಿ, ಅನಾಥವಾಗಿ ಬಿದ್ದ 50ಕ್ಕೂ ಹೆಚ್ಚು ಶವಗಳ ಶವಸಂಸ್ಕಾರ ಮಾಡಿದ ಸಮಾಜಪರ ಕಾರ್ಯಕೈಕೊಂಡ ಸಂಸ್ಥೆಗೆ 10 ವರ್ಷ ತುಂಬಿದ ಸಂಭ್ರಮವನ್ನು ರಾಷ್ಟ್ರ ಮಟ್ಟದಲ್ಲಿ ಸಾಧನೆ ಮಾಡಿದ ಡಾ. ವಿಜಯಲಕ್ಷ್ಮಿ ಬಾಳೆಕುಂದ್ರಿ, ಕ. ರಾ. ಅ. ಮ. ವಿ. ವಿಯ ಕುಲಪತಿಗಳಾದ ಪ್ರೊ. ವಿಜಯಾ ಬಿ. ಕೋರಿಶೆಟ್ಟಿ, ನಾಟ್ಯ ಕಲಾವಿದೆ ವಿದುಷಿ ದೀಕ್ಷಾ ಭೀಸೆ, ಅನುರಾಧಾ ಜೆ. ಸುತಾರ ಇವರಿಗೆ "ಸಬಲೆ" ರಾಜ್ಯಮಟ್ಟದ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುತ್ತಿದೆ. ಈ ಕಾರ್ಯಕ್ರಮದ ಅಧ್ಯಕ್ಷತೆ ಪ್ರೀತಿ ಪತ್ತಾರ ವಹಿಸಲಿದ್ದಾರೆ. ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಮಹೇಶ ಪೋತದಾರ ಮತ್ತು ರೂಪಾ ಮಹೇಶ ಪೋತದಾರ ಉದ್ಘಾಟನೆ ನೆರವೇರಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಕೆ. ಕೆ. ಚವ್ಹಾಣ, ಮಹಾನಗರ ಪಾಲಿಕೆಯ ಉಪ ಆಯುಕ್ತ ಮಹಾವೀರ ಬೋರಣ್ಣವರ, ಡಾ. ಶ್ವೇತಾ ಶರಣ್, ವಿಶೇಷ ಆಹ್ವಾನಿತಾರಾಗಿ ಭೂ ಮಾಪನ ಇಲಾಖೆಯ ಡಿ. ಡಿ. ಎಲ್. ಆರ್. ಮಹಾಂತೇಶ ಮುಳಗುಂದ, ಅಜೀತ ಎನ್. ಮುತ್ತಿನ, ಪ್ರಶಾಂತ ಹಾಜರೆ, ಹಿರಿಯ ಆಪ್ತ ಸಮಾಲೋಚಕ ರವಿಕಿತ್ತೂರ, ಆನಂದ ಸವಣೂರ, ಗೌರವ ಉಪಸ್ಥಿತಿಯಲ್ಲಿ ಪ್ರೊ. ಗಂಗಾಧರ ಸೋನಾರ, ಮುಖ್ಯಸ್ಥರು ಸಮಾಜಕಾರ್ಯ ವಿಭಾಗ ಕ. ರಾ. ಅ. ಮ. ವಿ.ವಿ ವಿಜಯಪುರ, ಪ್ರೊ. ಜ್ಯೋತಿ ಅ. ಉಪಾಧ್ಯಯ ಪ್ರಾಧ್ಯಾಪಕರು ಕ. ರಾ. ಮ. ವಿ. ವಿ ವಿಜಯಪುರರವರು ಕಾರ್ಯಕ್ರದಲ್ಲಿ ಭಾಗವಹಿಸಲಿದ್ದು 30ಜನ ಕಸಗೂಡಿಸುವ ಮಹಾನಗರ ಪಾಲಿಕೆ ಮಹಿಳಾ ಪೌರ ಕಾರ್ಮಿಕರಿಗೆ, ಸ್ವಸಹಾಯ ಸಂಘದಿಂದ ಬದುಕಿನಲ್ಲಿ ಯಶಸ್ವಿ ಕಂಡ ಸ್ವಾವಲಂಬಿ ಮಹಿಳೆಯರಿಗೆ ಸನ್ಮಾನಿಸುವದರೊಂದಿಗೆ, ಮುತ್ತುರಾಜ್ ಮದಾನಬಾವಿ, ಪಾಂಡುರಂಗ ಕುಲಕರ್ಣಿಯವರಿಂದ ಸಂಗೀತ ಕಾರ್ಯಕ್ರಮ ನಡೆಯಲಿದೆ. ವಿಜಯಪುರದ ಸ್ವಯಂಭೂ ಆರ್ಟ್ ಫೌಂಡೇಶನ್ ಮಕ್ಕಳಿಂದ, ಅನುರಾಧ ಸುತಾರ ಶಿಷ್ಯ ಬಳಗದಿಂದ ಹಾಗೂ ಮಾಸ್ಟರ್ ಸೂರ್ಯವಂಶಿ ತಂಡದವರಿಂದ ಸಾಂಸ್ಕೃತಿಕ ವೈಭವ ನಡೆಯುವುದೆಂದು ಪತ್ರಿಕಾಗೋಷ್ಠಿಯಲ್ಲಿ ವಿವರಿಸಿದರು.

ಸಂಸ್ಥೆಯ ಕಾರ್ಯದರ್ಶಿ ಮೋಹನ ಕಟ್ಟಿಮನಿ, ಸದಸ್ಯರಾದ ಮಹಾನಂದಾ ಪೋದ್ದಾರ, ಅರ್ಚನಾ ಪಾಠಕ, ಜ್ಯೋತಿ ವಾಲಿ, ದೀಪಾ ಹಂಜಗಿ, ವಿಜಯಲಕ್ಷ್ಮಿ ಗೌಡರ ಮತ್ತು ಜಯಶ್ರೀ ಅಂಗಡಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ನೀರು, ಮೇವಿನ ಸಮಸ್ಯೆಯಾಗದಂತೆ ನೋಡಿಕೊಳ್ಳಿ



**ಚನ್ನಮ್ಮನ ಕಿತ್ತೂರು,ಮಾ.12:** ಈಗಾಗಲೇ ಬೇಸಿಗೆ ಪ್ರಾರಂಭವಾಗಿದ್ದು ಕೊಳವೆಭಾವಿಗಳು ಸ್ವಲ್ಪ ನೀರು ಕಡಿಮೆಯಾಗಿರುತ್ತವೆ. ಮಳೆಗಾಲ ಪ್ರಾರಂಭವಾಗುವುದು ದೂರವಿದ್ದು ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರು, ಜಾನುವಾರುಗಳಿಗೆ ಮೇವಿನ ಸಮಸ್ಯೆಯಾಗದಂತೆ ಮುಂಜಾಗ್ರತೆ ಕ್ರಮವಹಿಸಬೇಕೆಂದು ಶಾಸಕ ಬಾಬಾಸಾಹೇಬ ಪಾಟೀಲ ಅಧಿಕಾರಿಗಳಿಗೆ ಖಡಕ್ಕಾಗಿ ಎಚ್ಚರಿಕೆ ನೀಡಿದರು.

ಸ್ಥಳೀಯ ತಾಪಂದಲ್ಲಿ ಮತ ಕ್ಷೇತ್ರದ ವ್ಯಾಪ್ತಿಯ ಗ್ರಾಮಗಳಿಗೆ ಬೇಸಿಗೆ ಸಮಯದಲ್ಲಿ ಕುಡಿಯುವ ನೀರು, ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ಮುಂಜಾಗ್ರತೆ ಕ್ರಮವಹಿಸಲು ಏರ್ಪಡಿಸಿದ್ದ ಸಭೆಯಲ್ಲಿ ಅಧ್ಯಕ್ಷಸ್ಥಾನ ವಹಿಸಿ ಮಾತನಾಡಿ ಗ್ರಾಮಗಳಲ್ಲಿ ನೀರು ವ್ಯರ್ಥವಾಗಿ ಹರಿಯದಂತೆ ವಾಟರ್‌ಮನ್‌ಗಳ ಜವಾಬ್ದಾರಿಯಾಗಿದ್ದು ಸಾರ್ವಜನಿಕರಿಗೆ ಈ ಕುರಿತು ಜಾಗೃತಿ ಮೂಡಿಸಿ ನೀರು ವ್ಯರ್ಥವಾಗದಂತೆ ನೋಡಿಕೊಳ್ಳಬೇಕು. ಅಧಿಕಾರಿಗಳು ಕುಡಿಯುವ ನೀರಿನ ಮತ್ತು ಮೇವಿನ ವ್ಯವಸ್ಥೆ ನೋಡಿಕೊಳ್ಳಬೇಕು. ನೀರಿನ ಲಭ್ಯತೆ ಬಗ್ಗೆ ನಿಖರ ಮಾಹಿತಿ ನೀಡಬೇಕು. ನೀರು ಮತ್ತು ಮೇವಿನ ಅಭಾವ ಇರುವ ಕಡೆಗಳಲ್ಲಿ ಬೋರವೆಲ್‌ಗಳಿಂದ ನೀರು ಪಡೆದು ಟ್ಯಾಂಕರ್ ಮೂಲಕ ಸಾರ್ವಜನಿಕರಿಗೆ, ಜಾನುವಾರುಗಳಿಗೆ ಮೇವು ಸಹ ಕೊರತೆಯಾಗದಂತೆ ಕ್ರಮಕೈಗೊಳ್ಳಬೇಕೆಂದರು.

ತಹಶಿಲ್ದಾರ ಕಲ್ಲನಗೌಡ ಪಾಟೀಲ ಮಾತನಾಡಿ ಬೇಸಿಗೆ ಆರಂಭವಾಗಿದ್ದರಿಂದ ಗ್ರಾಪಂ ವ್ಯಾಪ್ತಿಯಲ್ಲಿ ನೀರು ಪೋಲು ಮಾಡದಂತೆ ಅಧಿಕಾರಿಗಳು, ವಾಟರ್‌ಮನ್‌ಗಳು ಸಾರ್ವಜನಿಕರಿಗೆ ಅರಿವು ಮೂಡಿಸಬೇಕು. ಅನಾವಶ್ಯಕ ನೀರು ವ್ಯರ್ಥ ಮಾಡದಂತೆ ಮಿತವಾಗಿ ನೀರು ಬಳಸಲು ತಿಳಿಹೇಳಬೇಕು. ಅದಲ್ಲದೇ ನೀರಿನ ರಕ್ಷಣೆ ಬಗ್ಗೆ ಮಾಹಿತಿ ನೀಡಿ ಸಣ್ಣಪುಟ್ಟ ತಾಂತ್ರಿಕ ಸಮಸ್ಯೆಗಳನ್ನು ತಕ್ಷಣ ಪಹರಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ಅಥಿತಿಗಳಾಗಿ ಇಓ ನಿಂಗಪ್ಪ ಮಸಳಿ, ಗ್ರಾಪಂ ಅಭಿವೃದ್ಧಿ ಅಧಿಕಾರಿಗಳಾದ ಸ್ಮಿತಾ ಚಂದರಗಿ, ಮಂಜುನಾಥ ಕುಡಾಳೆ, ಸುಬಾಸ್ ದಾನಪ್ಪನವರ, ರಾಧಾ, ಈಶ್ವರ ಹಡಪದ, ರವಿ ಉಡಕೇರಿ, ಎಸ್.ಎಂ ಪಾಟೀಲ, ವಿನಾಯಕ ಕೊರವಿ, ಜೈರಾಮ ಕಾದ್ರೊಳ್ಳಿ, ಜಗದೀಶ ಗೌಡರ, ಮೇರಿ ಯಲಕಪತಿ, ರಶ್ಮಿ ಥಾವರಿ, ಗುರುವೈನವರಮತ ಅಧಿಕಾರಿಗಳಿದ್ದರು.

# ಪಟ್ಟಾಧಿಕಾರ ಮಹೋತ್ಸವ ಪೂರ್ವಭಾವಿ ಸಭೆ

**ನವಲಗುಂದ,ಮಾ.12:** ಪಟ್ಟಣದ ಶ್ರೀ ಸಂಸ್ಥಾನ ಪಂಚಗ್ರಹ ಹಿರೇಮಠದ ನೂತನ ಶ್ರೀಗಳ ಪಟ್ಟಾಧಿಕಾರ ಮಹೋತ್ಸವವನ್ನು ಮೇ.12ಮತ್ತು 13ರಂದು ಜರುಗಿಸಲಾಗುವುದು ಈ ಕಾರ್ಯಕ್ರಮದಲ್ಲಿ ಪಂಚಪೀಠಾಧೀಶ್ವರರು ಭಾಗಿಯಾಗುವರು ಎಂದು ಶ್ರೀ ಷ.ಬ್ರ.ಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು ಪಟ್ಟಾಧಿಕಾರ ಮಹೋತ್ಸವದ ಮೊದಲು ಮೇ.01ರಿಂದ ಮನಕವಾಡದ ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳು ಹನ್ನೊಂದು ದಿನಗಳ ಕಾಲ ಪ್ರವಚನ ನಡೆಯುವದು. ಅಲ್ಲದೇ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗುವುದು ಮಠದ ಸದ್ಭಕ್ತರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು.

ಇದೇ ವೇಳೆ ಪಟ್ಟಾಧಿಕಾರ ಮಹೋತ್ಸವದ ಪತ್ರಿಕೆ ಹಾಗೂ ದೇಣಿಗೆ ರಸೀದಿ ಬಿಡುಗಡೆ ಮಾಡುವ ಮೂಲಕ ಮಹೋತ್ಸವದ ಕಾರ್ಯಗಳಿಗೆ ಚಾಲನೆ ನೀಡಲಾಯಿತು.



ಈ ಸಂದರ್ಭದಲ್ಲಿ ನಿಯೋಜಿತ ಉತ್ತರಾಧಿಕಾರಿ ವೀರಬಸವದೇವರು, ಪಾಂಡಪ್ಪ ಕೋನರೆಡ್ಡಿ, ಬಾಬಾಜಾನ್ ಮುಲ್ಲಾ, ಅಣ್ಣಪ್ಪ ಬಾಗಿ, ಹುಚ್ಚಪ್ಪ ಭೋವಿ, ಕಲ್ಲಯ್ಯ ಹೊಸಮನಿ, ಅಪ್ಪಣ್ಣ ಹಳ್ಳದ, ಶ್ರೀಶೈಲ ಮೂಲಿಮನಿ, ಶಿವಾಜಿ ಕಲಾಲ, ಶರ್ಮಾ ಹಿರೇಮಠ, ವೀರೇಶ ಜಾವೂರಮಠ, ಎಂ.ಡಿ.ಕುಲಕರ್ಣಿ, ಯಲ್ಲಪ್ಪಗೌಡ ಪಾಟೀಲ, ಕೊಟ್ರೇಶ ಹಿರೇಮಠ, ಶಂಕರಗೌಡ ಪಾಟೀಲ, ಈರಣ್ಣ ಚವಡಿ, ಗಂಗಾಧರ ಹಳ್ಳದ, ಆರ್.ಎಚ್.ನೇಗಲಿ, ಯಲ್ಲಪ್ಪ ಭೋವಿ, ಮಲ್ಲಿಕಾರ್ಜುನ ಜಲಾಧಿ, ಬಾಬು ಹುರಕಡ್ಲಿ, ಶಂಕರಯ್ಯ ಸುಬೇದಾರಮಠ ಸೇರಿದಂತೆ ಅನೇಕರು ಇದ್ದರು

# ಬೀದರದಲ್ಲಿ ಪಿಎಲ್‌ಎಚ್‌ಐವಿ ಸಮುದಾಯದ ಅನುಭವ ಹಂಚಿಕೆ ಸಭೆ: ಕಿಟ್ ವಿತರಣೆ




**ಬೀದರ್: ಮಾ.12:**ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಸಂಸ್ಥೆ, ಬೆಂಗಳೂರು, ಜಿಲ್ಲಾ ಏಡ್ಸ್ ನಿಯಂತ್ರಣ ಘಟಕ ಹಾಗೂ ಲಾಲ್ ಬಹಾದ್ದೂರ್ ಶಿಕ್ಷಣ ಸಂಸ್ಥೆಯ ಸಿಎಸ್‌ಸಿ ಯೋಜನೆ, ಬೀದರ ಮತ್ತು ಬ್ರಿಮ್ಸ್ ಆಸ್ಪತ್ರೆಯ ಎಆರ್‌ಟಿ ಕೇಂದ್ರದ ಸಂಯುಕ್ತ ಆಶ್ರಯದಲ್ಲಿ ಪಿಎಲ್‌ಎಚ್‌ಐವಿ (PLHIV) ಸಮುದಾಯದವರಿಗಾಗಿ ಎಕ್ಸ್ಪೀರಿಯನ್ಸ್ ಶೇರಿಂಗ್ ಮೀಟಿಂಗ್ (ESM) ಕಾರ್ಯಕ್ರಮವನ್ನು ಬೀದರದಲ್ಲಿ ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಎಚ್‌ಐವಿ ಸೋಂಕಿತ ಸಮುದಾಯದವರು ಔಷಧಿಗಳನ್ನು ನಿಯಮಿತವಾಗಿ ಸೇವಿಸುವುದರಿಂದಾಗುವ ಲಾಭಗಳು ಹಾಗೂ ಎಆರ್‌ಟಿ ಸೇವೆಗಳ ಬಗ್ಗೆ ತಮ್ಮ ಅನುಭವಗಳನ್ನು ಮುಕ್ತವಾಗಿ ಹಂಚಿಕೊಳ್ಳಲು ವೇದಿಕೆ ಒದಗಿಸಲಾಯಿತು.

ಕಾರ್ಯಕ್ರಮವನ್ನು ಶ್ರೀಮತಿ ಶ್ವೇತಾ ರಾಜೇಶ್ವರ ಹಾಗೂ ಶ್ರೀಮತಿ ಅನ್ನಪೂರ್ಣ ಮಸ್ಕಲೆ ಅವರು ಉದ್ಘಾಟಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾಪ್ಕೋ ಕಾರ್ಯಕ್ರಮಾಧಿಕಾರಿ ಅನೀಲಕುಮಾರ್ ಚಿಂತಾಮಣಿ ವಹಿಸಿದ್ದರು. ಈ ಸಂದರ್ಭದಲ್ಲಿ ಇಕೆಐ ಬೀದರ ಅಧ್ಯಕ್ಷ ಮಲ್ಲಿಕಾರ್ಜುನ ಪಾಟೀಲ್, ಬ್ರಿಮ್ಸ್ ಆಸ್ಪತ್ರೆಯ ಎಆರ್‌ಟಿ ವೈದ್ಯಾಧಿಕಾರಿ ಡಾ. ಮಹೇಶ್ ರೆಡ್ಡಿ, ಜಿಲ್ಲಾ ಮೇಲ್ವಿಚಾರಕ ಸೂರ್ಯಕಾಂತ, ಇಕೆಐ ಬೀದರ ಶಾಖಾ ವ್ಯವಸ್ಥಾಪಕ ಶ್ರೀನಿವಾಸ್, ಎಆರ್‌ಟಿ ಡೇಟಾ ಮ್ಯಾನೇಜರ್ ಶಿವಕುಮಾರ್, ಮೆಟ್ರೋ ಉತ್ತರ ಕರ್ನಾಟಕ ವಿಭಾಗದ ಸುಬ್ಬಯ್ಯ ಗುತ್ತೇದಾರ (SVYM), ವಿಜಯರಾಜ ಮಿಷನ್ ಅಧ್ಯಕ್ಷ ಧನರಾಜ, ಎಲ್‌ಬಿಇಎಸ್ ಯೋಜನಾ ವ್ಯವಸ್ಥಾಪಕ ವಿಶ್ವನಾಥ ಸ್ವಾಮಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಈ ವೇಳೆ ಮಾತನಾಡಿದ ಸೂರ್ಯಕಾಂತ ಅವರು ಬೀದರ ಜಿಲ್ಲೆಯ ಎಚ್‌ಐವಿ ಹಾಗೂ ಎಆರ್‌ಟಿ ಸಂಬಂಧಿತ ಅಂಕಿಅಂಶಗಳ ಕುರಿತು ವಿವರಿಸಿದರು. ನಂತರ ಯೋಜನಾ ಅಧಿಕಾರಿಗಳು ಎಆರ್‌ಟಿ ಔಷಧಿಗಳನ್ನು ನಿಯಮಿತವಾಗಿ ಸೇವಿಸುವುದರಿಂದ ವ್ಯಕ್ತಿಯ ಆರೋಗ್ಯ, ಕುಟುಂಬ ಹಾಗೂ ಸಮಾಜದ ಮೇಲೆ ಉಂಟಾಗುವ ಉತ್ತಮ ಪರಿಣಾಮಗಳ ಕುರಿತು ಮಾಹಿತಿ ನೀಡಿದರು.

ವಿಜಯರಾಜ್ ಮಿಷನ್ ಅಧ್ಯಕ್ಷ ಧನರಾಜ್ ಮಾತನಾಡಿ, ಎಆರ್‌ಟಿ ಔಷಧಿಗಳನ್ನು ಪಡೆಯುವಲ್ಲಿ ಆರ್ಥಿಕ ಸಮಸ್ಯೆಗಳು ಎದುರಾದರೆ ಅದನ್ನು ಮುಕ್ತವಾಗಿ ತಿಳಿಸಿದಲ್ಲಿ ಅಗತ್ಯ ಸಹಾಯ ಒದಗಿಸಲಾಗುವುದಾಗಿ ಹೇಳಿದರು.

ಕಾರ್ಯಕ್ರಮದ ಅಂಗವಾಗಿ ಇತ್ತೀಚೆಗೆ 10 ಪಿಎಲ್‌ಎಚ್‌ಐವಿ ತಾಯಂದಿರಿಗೆ ಮಕ್ಕಳ ಉತ್ತಮ ಬೆಳವಣಿಗೆಗಾಗಿ ಅಗತ್ಯವಾದ 19 ವಸ್ತುಗಳನ್ನು ಒಳಗೊಂಡ ಕಿಟ್‌ಗಳನ್ನು ಸುಬ್ಬಯ್ಯ ಸರ್ ವಿತರಿಸಿದರು.

ಕಾರ್ಯಕ್ರಮವನ್ನು ಬ್ರಿಮ್ಸ್ ಆಸ್ಪತ್ರೆಯ ಐಸಿಟಿಸಿ ಆಪ್ತ ಸಲಹೆಗಾರ ಅರವಿಂದ ಕುಣಕಣಿ ನಿರ್ವಹಿಸಿದರು

# ನಗನೂರು: ಕೆಪಿಎಸ್ ಮ್ಯಾಗ್ನೆಟ್ ವಿರುದ್ಧ ಎಐಡಿಎಸ್‌ಓ ಪ್ರತಿಭಟನೆ



**ಯಾದಗಿರಿ,ಮಾ.12–**ಜಿಲ್ಲೆಯ ಸುರಪುರ ತಾಲೂಕಿನ ನಗನೂರು ಸರ್ಕಾರಿ ಉರ್ದು ಶಾಲೆ ಮತ್ತು ಗುಡ್ಡದ ಗುರುಲಿಂಗೇಶ್ವರ ಬಡಾವಣೆಯ ಸರ್ಕಾರಿ ಶಾಲೆ, ಉಳಿಸಲು ಪೋಷಕರು ಮತ್ತು ಗ್ರಾಮಸ್ಥರು ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆಯ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯನ್ನು ಉದ್ದೇಶಿಸಿ ಎಐಡಿಎಸ್‌ಓ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯರಾದ ಲಕ್ಕಪ್ಪ ಅವರು ಮಾತನಾಡುತ್ತಾ, ರಾಜ್ಯ ಸರ್ಕಾರ ಕೆಪಿಎಸ್ ಮ್ಯಾಗ್ನೆಟ್ ಶಾಲೆಯನ್ನು ತೆರೆಯುವ ಮೂಲಕ ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗೆ ಒಂದೇ ಶಾಲೆ ಪ್ರಾರಂಭಿಸಿ, ರಾಜ್ಯದಲ್ಲಿ 40,000 ಸರ್ಕಾರಿ ಶಾಲೆಗಳನ್ನು ಮುಚ್ಚಿ ಬಡ ವಿದ್ಯಾರ್ಥಿಗಳ ಭವಿಷ್ಯದ ಜೊತೆ ಚೆಲ್ಲಾಟವಾಡುತ್ತಿದೆ. ಈ ದೇಶದಲ್ಲಿ ಹಲವಾರು ಮಹಾನ್ ವ್ಯಕ್ತಿಗಳ ಹೋರಾಟದ ಮೂಲಕ ಶಿಕ್ಷಣ ಬಂದಿದೆ. ಕೆಪಿಎಸ್ ಮ್ಯಾಗ್ನೆಟ್ ಯೋಜನೆಯು ಶಿಕ್ಷಣವನ್ನು ಕೇವಲ ಕೆಲವರ ಸ್ವತ್ತನ್ನಾಗಿಸುತ್ತದೆ. ಒಂದೆಡೆ, ಒಂದೇ ಒಂದು ಶಾಲೆಯನ್ನು ಮುಚ್ಚುವುದಿಲ್ಲ ಎಂದು ಹೇಳುವ ಶಿಕ್ಷಣ ಸಚಿವರು ಇನ್ನೊಂದೆಡೆ ಶಾಲೆಗಳನ್ನು ಮುಚ್ಚುವ ಸುಸ್ಪಷ್ಟ ಆದೇಶವನ್ನು ಇಲಾಖೆಯಿಂದ ಹೊರಡಿಸಿದ್ದಾರೆ.

ಮುಂದುವರೆದು ಮಾತನಾಡುತ್ತ ಕಲ್ಯಾಣ ಕರ್ನಾಟಕ ಜಿಲ್ಲೆಗಳ ಅಭಿವೃದ್ಧಿಗೆ ಇರುವ ಕಲ್ಯಾಣ ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿ ಮಂಡಳಿ (ಕೆಕೆಆರ್ ಡಿಬಿ) ನಿಧಿಯನ್ನು ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳ ಸ್ಥಾಪನೆಗಾಗಿ ಬಳಸಲಾಗುತ್ತಿದೆ. ಇಲ್ಲಿಯ ಜನರಿಗೆ ಆಸ್ಪತ್ರೆಗಳು ಉದ್ಯೋಗ ಸೃಷ್ಟಿಸುವುದು ಇಲ್ಲಿಯ ಜನರ ಜೀವನ ಮಟ್ಟವನ್ನು ಮೇಲೆತ್ತಲು ಬಳಸಬೇಕಾದ ಈ ಹಣವನ್ನು ಸರ್ಕಾರಿ ಶಾಲೆ ಮುಚ್ಚಲು ಬಳಸುತ್ತಿರುವುದು ಖಂಡನೀಯ ಎಂದರು. ಗ್ರಾಮದಲ್ಲಿರುವ ಸರ್ಕಾರಿ ಶಾಲೆಗಳಿಗೆ ಮಕ್ಕಳು ನೇರವಾಗಿ ಹೋಗಿ ಮನೆಗೆ ಬರುತ್ತಾರೆ, ಈಗ ಈ ವ್ಯವಸ್ಥೆಯನ್ನು ಬದಲಾಯಿಸಿ ಕರ್ನಾಟಕ ಪಬ್ಲಿಕ್ ಶಾಲೆ ಹೆಸರಿನಲ್ಲಿ ಶಾಲೆಗಳನ್ನು ಮುಚ್ಚುವುದು ಸರಿಯಲ್ಲ. ನಾವು ಕೂಲಿ ಮಾಡಿ ಜೀವನ ನಡೆಸುವ ಮಂದಿ ನಮ್ಮ ಮಕ್ಕಳನ್ನು ಅಷ್ಟು ದೂರ ಕಳುಹಿಸಲು ಆಗುವುದಿಲ್ಲ ನಮ್ಮೂರಿನ ಸರ್ಕಾರಿ ಶಾಲೆ ನಮ್ಮೂರಿನಲ್ಲೇ ಇರಲಿ ಎಂದು ಘೋಷಣೆಗಳನ್ನು ಕೂಗುತ್ತಾ ಸರ್ಕಾರದ ವಿರುದ್ಧ ಆಕ್ರೋಶವನ್ನು ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಭಾಷಾ ಸಾಬ್, ಹಸನ್ ಸಾಬ್, ಅಬ್ದುಲ್ ರಹಿಮ್ ಸಾಬ್, ರಹೀಮ್ ಸಾಬ್, ತಿರುಪತಿ, ಹೊನ್ನಪ್ಪ, ಹಣಮಂತರಾಯ, ಸಿದ್ದಣ್ಣ ಹಳ್ಳಿ, ಮಾಲಮ್ಮ, ಶಿವರಾಜ್, ಸಿದ್ದಣ್ಣ, ಗುರುನಾಥ, ದೇವಿಂದ್ರ, ಭಾಗ್ಯಮ್ಮ ಸೇರಿದಂತೆ ಅನೇಕ ಪೋಷಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಮುಂಬರುವ ಮಹನೀಯರ ಜಯಂತಿಗಳನ್ನುಅರ್ಥಪೂರ್ಣವಾಗಿ ಆಚರಿಸೋಣ:ಎಡಿಸಿ ಶಿವಾನಂದ ಬಿ.ಕರಾಳೆ



**ಬೀದರ, ಮಾ.12:** ಮುಂಬರುವ ದಿನಾಂಕಗಳಂದು ಬರುವ ಮಹನೀಯರ ಜಯಂತಿಗಳನ್ನು ಅರ್ಥಪೂರ್ಣವಾಗಿ ಆಚರಿಸೋಣ ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಬಿ.ಕರಾಳೆ ತಿಳಿಸಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಾ.23 ರಂದು ದೇವರ ದಾಸಿಮಯ್ಯ ಜಯಂತಿ, ಮಾ.28 ರಂದು ಶ್ರೀ ಅಗ್ನಿಬನ್ನಿರಾಯ ಜಯಂತಿ, ಮಾ.31 ರಂದು ಭಗವಾನ ಮಹಾವೀರ ಜಯಂತಿಗಳ ಆಚರಣೆ ಕುರಿತು ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಾರ್ಚ್.23 ರಂದು ಬರುವ ದೇವರ ದಾಸಿಮಯ್ಯ ಜಯಂತಿ ದಿನದಂದು ಬೆಳಿಗ್ಗೆ 9 ಗಂಟೆಗೆ ಎಲ್ಲಾ ಸರಕಾರಿ, ಅರೆ ಸರಕಾರಿ, ಶಾಲಾ–ಕಾಲೇಜುಗಳಲ್ಲಿ, ಸಂಘ–ಸಂಸ್ಥೆಗಳಲ್ಲಿ ದೇವರದಾಸಿಮಯ್ಯ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಂತರ ಬೆಳಿಗ್ಗೆ 9.30 ಗಂಟೆಗೆ ಜಿಲಾಧಿಕಾರಿಗಳ ಕಚೇರಿಯಲ್ಲಿ ಭಾಚಿತ್ರಕ್ಕೆ ಪೂಜೆ ಕಾರ್ಯಕ್ರಮದಲ್ಲಿ ಭಾಗವಹಿಸುವುದು. ನಂತರ ಶಿವಾಜಿ ವೃತ್ತದಿಂದ ದೇವರ ದಾಸಿಮಯ್ಯ ಭಾವಚಿತ್ರದ ಮೆರವಣಿಗೆಯು ಪ್ರಾರಂಭಗೊಂಡು ಭಗತಸಿಂಗ ವೃತ್ತ, ಬಸವೇಶ್ವರ ವೃತ್ತ, ಅಂಬೇಡ್ಕರ್ ವೃತ್ತ, ಜನರಲ್ ಕರೀಯಪ್ಪ ವೃತ್ತದಿಂದ ಹಾದು ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರಕ್ಕೆ ತಲುಪಿ ನಂತರ ಬೆಳಿಗ್ಗೆ 11.30 ಗಂಟೆಗೆ ವೇದಿಕೆ ಕಾರ್ಯಕ್ರಮ ಜರುಗಲಿದೆಂದರು.

ಮಹಾನಗರ ಪಾಲಿಕೆ ವತಿಯಿಂದ ಎಲ್ಲ ವೃತ್ತಗಳ ಮೇಲೆ ದೀಪಲಾಂಕರ, ರಸ್ತೆ ಸುತ್ತ ಮುತ್ತ ಸ್ವಚ್ಚತೆ, ಕುಡಿಯುವ ನೀರಿನ ವ್ಯವಸ್ಥೆ ಮಾಡುವುದು. ಪೊಲೀಸ್ ಇಲಾಖೆ ವತಿಯಿಂದ ಮೆರವಣಿಗೆ ಹಾದು ಹೋಗುವ ಸ್ಥಳಗಳಲ್ಲಿ ಸೂಕ್ತ ಬಂದೋಬಸ್ತ ವ್ಯವಸ್ಥೆ ಒದಗಿಸಬೇಕೆಂದರು.

ಮಾರ್ಚ್.28 ರಂದು ಬರುವ ಶ್ರೀ ಅಗ್ನಿಬನ್ನಿರಾಯರ ಜಯಂತಿ ಎಲ್ಲ ಶಾಲಾ ಕಾಲೇಜು, ಸಂಘ ಸಂಸ್ಥೆಗಳಲ್ಲಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಸರಳವಾಗಿ ಆಚರಣೆ ಮಾಡುವುದು. ಮಾರ್ಚ್.31 ರಂದು ಬರುವ ಭಗವಾನ ಮಹಾವೀರ ಜಯಂತಿಯನ್ನು ಕ್ರಾಂತಿ ಗಣೇಶ ಮಂದಿರ ಹತ್ತಿರ ಬರುವ ಚಂದ್ರಪ್ರಭ ದಿಗಂಬರ ಜೈನಮಂದಿರದಿಂದ ಮೆರವಣಿಗೆ ಪ್ರಾರಂಭಗೊಂಡು, ಗವಾನ ಚೌಕ, ಚೌಬಾರಾ, ನಯಾಕಮಾನ, ಬಸವೇಶ್ವರ ವೃತ್ತ, ಮಹಾವೀರ ಸರ್ಕಲ್, ಅಂಬೇಡ್ಕರ್ ವೃತ್ತ, ಜೈನ್ ಮಂದಿರದಲ್ಲಿ ಸಮಾಪ್ತಗೊಳ್ಳುವುದು ಎಂದು ತಿಳಿಸಿದರು.

ಈ ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ರಾಮ ಸಿಂಧೆ, ಅನಿತಾ ಶಾಪುರೆ, ದೇವರ ದಾಸಿಮಯ್ಯ ಜಯಂತಿ ಅಧ್ಯಕ್ಷ ಸೋಮಶೇಖರ ಅಮಲಾಪೂರ, ರಾಮಕರಪ್ಪ ಸಾಳೆ, ರಾಜಶೇಖರ ವಡಗೆ, ವಿಶ್ವನಾಥ ಕೋಟೆ, ಶರಣಪ್ಪ ಹಾವಗೊಂಡ, ರಾಜಶೇಖರ ಲಕೋಟೆ, ರಾಜೇಂದ್ರ ಅಂಬಾಜಿ, ನಾಗನಾಥ ಇದ್ದಲಗಾಂವ, ಮಾಧವ ಚಾಡಕಾರ ಭಗವಾನ ಮಹಾವೀರ ಜಯಂತಿ ಅಧ್ಯಕ್ಷರಾದ ನರಸಿಂಹರಾಜ ಟೆಕ್ಕೆ, ಸೇರಿದಂತೆ ಸಮಾಜದ ಮುಖಂಡರು, ಗಣ್ಯರು, ಅಧಿಕಾರಿಗಳು ಉಪಸ್ಥಿತರಿದ್ದರು.

# ಮಹಿಳೆ ಯಾವುದಕ್ಕೂ ಕಡಿಮೆ ಇಲ್ಲ: ಡಾ. ದೀಪಮಾಲಾ ಪಾಟೀಲ




**ಆಲಮೇಲ:ಮಾ.12:** "ಹೋರಾಟದ ಹಾದಿಯನ್ನು ತುಳಿದು ಸರ್ವಕಾಲದಲ್ಲಿಯೂ ತನ್ನ ಅಸ್ತಿತ್ವವನ್ನು ಉಳಿಸಿಕೊಂಡಿರುವ ಮಹಿಳೆಯು ಇಂದು ಸಮಾಜದ ಯಾವುದೂ ಕ್ಷೇತ್ರದಲ್ಲೂ ಯಾರಿಗೂ ಕಡಿಮೆಯೇನಿಲ್ಲ," ಎಂದು ವೈದ್ಯೆ ಡಾ. ದೀಪಮಾಲಾ ಪಾಟೀಲ ಅಭಿಪ್ರಾಯಪಟ್ಟರು.

ಪಟ್ಟಣದಲ್ಲಿ ಇತ್ತೀಚೇಗೆ ನಡೆದ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ 'ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ' ಕಾರ್ಯಕ್ರಮದಲ್ಲಿ ಅವರು ಉಪನ್ಯಾಸ ನೀಡಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಸಕ ಅಶೋಕ ಮನಗೂಳಿ ಅವರು, "ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡುವ ಶಕ್ತಿ ಮಹಿಳೆಗಿದೆ. ಮಹಿಳೆಯರನ್ನು ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಸಬಲರನ್ನಾಗಿ ಮಾಡಲು ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ಆ ಮೂಲಕ ಮಹಿಳೆಯರ ಬದುಕಿಗೆ ಭದ್ರತೆ ನೀಡುವ ಕೆಲಸ ಮಾಡಲಾಗುತ್ತಿದೆ," ಎಂದರು.

ಬ್ರಹ್ಮಕುಮಾರಿ ರೇಣುಕಾ ಅಕ್ಕನವರು ಸಾನಿಧ್ಯ ವಹಿಸಿದ್ದರು. ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ತಾಲ್ಲೂಕು ಅಧ್ಯಕ್ಷ ಅಶೋಕ ಕೊಳಾರಿ ಅಧ್ಯಕ್ಷತೆ ವಹಿಸಿದ್ದರು.

ವೇದಿಕೆಯಲ್ಲಿ ಡಾ.ಮಂಜೂಷಾ ಪಾಟೀಲ, ಜಿ.ಪಂ. ಮಾಜಿ ಸದಸ್ಯೆ ಶಂಕ್ರಮ್ಮ ಹೂಗಾರ, ತಾ.ಪಂ. ಮಾಜಿ ಅಧ್ಯಕ್ಷೆ ಸುನೀತಾ ಮೇಲಿನಮನಿ, ಬ್ಲಾಕ್ ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷೆ ಶೈಲಾ ಹೊಸಮನಿ, ಸುನಂದಾ ಯಂಪೂರೆ ಉಪಸ್ಥಿತರಿದ್ದರು. ಕಸಾಪ ಅಧ್ಯಕ್ಷ ಶಿವಶರಣ ಗುಂದಗಿ ಸ್ವಾಗತಿಸಿದರು. ಶರಣಮ್ಮ ಬೂದಿಹಾಳ ನಿರೂಪಿಸಿದರು. ಅಪ್ಪು ಶೆಟ್ಟಿ ವಂದಿಸಿದರು.

ಇದೇ ಸಂದರ್ಭದಲ್ಲಿ ಖ್ಯಾತ ಬಯಲಾಟ ಕಲಾವಿದೆ ಲಲಿತಾಬಾಯಿ ಹಿಕ್ಕನಗುತ್ತಿ ಅವರಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು. ರಂಗೋಲಿ ಸ್ಪರ್ಧೆಯಲ್ಲಿ ವಿಜೇತರಾದ ಪೂಜಾ ಹಳೆಮನಿ (ಪ್ರಥಮ), ಮೊನಾಲಿ ರಾಠೋಡ (ದ್ವಿತೀಯ) ಹಾಗೂ ಶಿಲ್ಪಾ ರಾಂಪೂರಮಠ (ತೃತೀಯ) ಅವರಿಗೆ ಬಹುಮಾನ ವಿತರಿಸಲಾಯಿತು.

# ವೃದ್ಧಾಶ್ರಮದ ವೃದ್ಧರಿಗೆ ಸೀರೆ ಹಾಗೂ ದಿನೋಪಯೋಗಿ ಸಾಮಗ್ರಿಗಳ ವಿತರಣೆ



**ಬೀದರ್:ಮಾ.12:**ಸಮಾಜ ಸೇವೆಯ ಭಾಗವಾಗಿ ಬೀದರ್ ಜಿಲ್ಲಾ ಆಯುಷ್ ವೈದ್ಯರ ಸಂಘದ ವತಿಯಿಂದ ಮಹಾತ್ಮಾ ಜ್ಯೋತಿಬಾ ಫುಲೆ ವೃದ್ಧಾಶ್ರಮದ ವೃದ್ಧರಿಗೆ ಉಚಿತವಾಗಿ ಸೀರೆ ಮತ್ತು ವಿವಿಧ ದಿನೋಪಯೋಗಿ ಸಾಮಗ್ರಿಗಳನ್ನು ವಿತರಿಸುವ ಕಾರ್ಯಕ್ರಮ ಸೋಮವಾರ ನಡೆಯಿತು.

ಕಾರ್ಯಕ್ರಮಕ್ಕೆ ಜಿಲ್ಲಾ ಆಯುಷ್ ಅಧಿಕಾರಿ ಡಾ. ಖಾತುಜಾ ಬೇಗಂ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಸಮಾಜದಲ್ಲಿ ಹಿರಿಯ ನಾಗರಿಕರ ಪಾಲನೆ-ಪೋಷಣೆ ಎಲ್ಲರ ಜವಾಬ್ದಾರಿ ಆಗಿದೆ. ವೃದ್ಧಾಶ್ರಮಗಳಲ್ಲಿ ವಾಸಿಸುವ ಹಿರಿಯರಿಗೆ ಸಹಾಯ ಮಾಡುವ ಮೂಲಕ ಅವರಿಗೆ ಮಾನಸಿಕ ಧೈರ್ಯ ಹಾಗೂ ಸಂತೋಷ ನೀಡುವುದು ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು. ಇಂತಹ ಸೇವಾ ಕಾರ್ಯಗಳು ಸಮಾಜದಲ್ಲಿ ಮಾನವೀಯ ಮೌಲ್ಯಗಳನ್ನು ಬಲಪಡಿಸುತ್ತವೆ ಎಂದರು.

ಬೀದರ್ ಜಿಲ್ಲಾ ಆಯುಷ್ ವೈದ್ಯರ ಸಂಘದ ಅಧ್ಯಕ್ಷರಾದ ಡಾ. ಸಂತೋಷಕುಮಾರ ಅಣ್ಣೆಪ್ಪನವರ ಅವರು ಮಾತನಾಡಿ, ಸಮಾಜ ಸೇವೆಯ ಉದ್ದೇಶದಿಂದ ಸಂಘವು ಸಮಯ ಸಮಯಕ್ಕೆ ಸಾಮಾಜಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ. ವೃದ್ಧಾಶ್ರಮದಲ್ಲಿ ವಾಸಿಸುವ ಹಿರಿಯ ನಾಗರಿಕರಿಗೆ ಅಗತ್ಯವಾದ ಸೌಲಭ್ಯಗಳನ್ನು ಒದಗಿಸುವುದು ನಮ್ಮ ಕರ್ತವ್ಯವಾಗಿದೆ ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಮಹಾತ್ಮಾ ಜ್ಯೋತಿಬಾ ಫುಲೆ ವೃದ್ಧಾಶ್ರಮದ ಆಡಳಿತಾಧಿಕಾರಿಗಳಾದ ನವೀನಕುಮಾರ ಮತ್ತು ಬಾಲಾಜಿ ಅವರು ಆಯುಷ್ ವೈದ್ಯರ ಸಂಘದ ಈ ಸೇವಾ ಕಾರ್ಯವನ್ನು ಪ್ರಶಂಸಿಸಿದರು. ವೃದ್ಧಾಶ್ರಮದ ನಿವಾಸಿಗಳಿಗೆ ಸೀರೆ ಹಾಗೂ ವಿವಿಧ ದಿನೋಪಯೋಗಿ ವಸ್ತುಗಳನ್ನು ವಿತರಿಸಿ ಅವರಿಗೆ ಶುಭಾಶಯಗಳನ್ನು ಕೋರಿದರು.

ಕಾರ್ಯಕ್ರಮದಲ್ಲಿ ರಾಜೀವ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇದರ ಬಿ.ಓ.ಎಸ್ ಸದಸ್ಯರಾದ ಡಾ. ಶಿವಶರಣಯ್ಯ ಮಠಪತಿ ಅವರನ್ನು ಸನ್ಮಾನಿಸಲಾಯಿತು. ಇದೇ ವೇಳೆ ಬೀದರ್ ಎಜುಕೇಶನ್ ಮತ್ತು ಚಾರಿಟೇಬಲ್ ಟ್ರಸ್ಟ್ನ ಕಾರ್ಯದರ್ಶಿ ಸೌಮ್ಯ ಅಣ್ಣೆಪ್ಪನವರ ಉಪಸ್ಥಿತರಿದ್ದರು. ಸಂಘದ ಪದಾಧಿಕಾರಿಗಳಾದ ಡಾ. ವಿರೇಶ ಹಿರೇಮಠ, ಡಾ. ಸುಜಾತಾ ಹೊಸಮನಿ, ಡಾ. ರಾಜಕುಮಾರ ಕೋಟೆ, ಡಾ. ವಿಜಯ ಹೈಬತಿ, ಡಾ. ಸಂತೋಷ ಪಾಟೀಲ ಸೇರಿದಂತೆ ಜಿಲ್ಲೆಯ ವಿವಿಧ ತಾಲ್ಲೂಕುಗಳಿಂದ ಆಗಮಿಸಿದ ಆಯುಷ್ ವೈದ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿ ಸೇವಾ ಕಾರ್ಯದಲ್ಲಿ ಕೈಜೋಡಿಸಿದರು.

# ಭೂಮಿ,ವಸತಿ ನಿವೇಶನ,ಸ್ಮಶಾನ ಸೌಲಭ್ಯಗಳಿಗಾಗಿ ಒತ್ತಾಯ



**ಯಾದಗಿರಿ:ಮಾ.12:**ಜಿಲ್ಲೆಯ ದಲಿತ ಕುಟುಂಬಗಳಿಗೆ ಭೂಮಿ, ವಸತಿ ನಿವೇಶನ ಹಾಗೂ ಸ್ಮಶಾನ ಸೌಲಭ್ಯಗಳನ್ನು ತಕ್ಷಣ ಒದಗಿಸಬೇಕೆಂದು ಒತ್ತಾಯಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಸಂಯೋಜಕ) ಯಾದಗಿರಿ ಜಿಲ್ಲಾ ಸಮಿತಿಯ ನೇತೃತ್ವದಲ್ಲಿ ಮಹಿಳೆಯರ ಭಾರೀ ನಿಯೋಗವು ರಾಜ್ಯದ ಲೋಕೋಪಯೋಗಿ ಇಲಾಖೆ ಸಚಿವರಾದ ಸತೀಶ್ ಜಾರಕಿಹೊಳಿ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿತು.

ಕರ್ನಾಟಕ ದಲಿತ ಸಂಘರ್ಷ ಸಮಿತಿ (ಸಂಯೋಜಕ) ರಾಜ್ಯಾಧ್ಯಕ್ಷರಾದ ಡಾ. ಆರ್. ಅಶ್ವತ್ ಅಂತೇಜ ಹಾಗೂ ರಾಜ್ಯ ಸಮಿತಿ ಸದಸ್ಯರಾದ ಎಂ. ರವಿಕುಮಾರ್ ಅವರ ಮಾರ್ಗದರ್ಶನದಲ್ಲಿ, ಜಿಲ್ಲಾಧ್ಯಕ್ಷರಾದ ಹತ್ತಿಗೂಡೂರು ಶರಣರೆಡ್ಡಿ ಅವರ ನೇತೃತ್ವದಲ್ಲಿ ಯಾದಗಿರಿ ಜಿಲ್ಲೆಯಿಂದ ಮಹಿಳೆಯರು ಮತ್ತು ಸಂಘಟನೆಯ ಕಾರ್ಯಕರ್ತರು ಸಚಿವರನ್ನು ಅವರ ಸರ್ಕಾರಿ ಅತಿಥಿ ಗೃಹದಲ್ಲಿ ಭೇಟಿ ಮಾಡಿ ಜಿಲ್ಲೆಯ ದಲಿತ ಕುಟುಂಬಗಳು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ವಿವರಿಸಿದರು.

ಈ ವೇಳೆ ಮಾತನಾಡಿದ ಹತ್ತಿಗೂಡೂರು ಶರಣರೆಡ್ಡಿ, ಯಾದಗಿರಿ ಜಿಲ್ಲೆಯ ಅನೇಕ ದಲಿತ ಕುಟುಂಬಗಳು ಇನ್ನೂ ಮೂಲಭೂತ ಸೌಲಭ್ಯಗಳಿಂದ ವಂಚಿತವಾಗಿದ್ದು, ಭೂಮಿ ಇಲ್ಲದೆ, ವಸತಿ ನಿವೇಶನವಿಲ್ಲದೆ ಹಾಗೂ ಸ್ಮಶಾನ ಸೌಲಭ್ಯಗಳ ಕೊರತೆಯಿಂದ ಸಂಕಷ್ಟ ಅನುಭವಿಸುತ್ತಿವೆ. ಸರ್ಕಾರದಿಂದ ಈ ಮೂಲಭೂತ ಹಕ್ಕುಗಳು ದೊರೆಯುವವರೆಗೂ ಕರ್ನಾಟಕ ದಲಿತ ಸಂಘರ್ಷ ಸಮಿತಿ ಹೋರಾಟ ಮತ್ತು ಚಳುವಳಿಯನ್ನು ನಿರಂತರವಾಗಿ ಮುಂದುವರಿಸಲಿದೆ ಎಂದು ಹೇಳಿದರು.
ಮನವಿ ಸ್ವೀಕರಿಸಿದ ಸಚಿವ ಸತೀಶ್ ಜಾರಕಿಹೊಳಿ ಅವರು ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ, ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ ಅಗತ್ಯ ಕ್ರಮಗಳನ್ನು ಕೈಗೊಂಡು ದಲಿತ ಕುಟುಂಬಗಳಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಪ್ರಯತ್ನಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಸಂಯೋಜಕ) ಜಿಲ್ಲಾ ಸಮಿತಿಯ ಪದಾಧಿಕಾರಿಗಳಾದ ಶರಣಪ್ಪ ಚಲವಾದಿ, ಸಿದ್ದಪ್ಪ ಹೊಸ್ಮನಿ, ಮಲ್ಲಮ್ಮ, ಬಸಲಿಂಗಮ್ಮ, ಶರಣಮ್ಮ, ಭೀಮಬಾಯಿ, ಗಂಗಮ್ಮ, ಎಲ್ಲಮ್ಮ, ಪ್ರಿಯಾ, ಜೇಜಮ್ಮ ಚಲವಾದಿ, ಸಿದ್ದಲಿಂಗಮ್ಮ, ಲಕ್ಷ್ಮಿ ಹೊಸಮನಿ, ಮರಿಯಮ್ಮ, ಮಾಳಮ್ಮ, ತಂಗಮ್ಮ ಸೇರಿದಂತೆ ನೂರಾರು ಮಹಿಳೆಯರು, ಯುವಕರು ಹಾಗೂ ಸಂಘಟನೆಯ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮಾರ್ಚ್ 16ರಂದು ಪಾಲಿಕೆ ಮುಂಗಡ ಪತ್ರ ಪೂರ್ವಭಾವಿ ಸಭೆ

**ರಾಯಚೂರು ಮಾ,12-** ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ 2026-27ನೇ ಸಾಲಿನ ಮುಂಗಡ ಪತ್ರವನ್ನು ತಯಾರಿಸಲು ಮಾರ್ಚ್ 16ರ ಬೆಳಿಗ್ಗೆ 10.30 ಗಂಟೆಗೆ ಜೋನಲ್ 01ರ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದ್ದು, ನೋಂದಾಯಿತ ಸ್ಥಳೀಯ ಕಲ್ಯಾಣ ಸಂಘ, ವ್ಯಾಪಾರ, ಉದ್ಯಮ ನಡೆಸುವ ಸಂಘ-ಸಂಸ್ಥೆಗಳು ಎನ್.ಜಿ.ಓ. ಸಂಘಗಳು ಸೇರಿದಂತೆ ಇತರೆ ಪ್ರಮುಖ ನಾಗರಿಕರು ಭಾಗಿಯಾಗಿ ಸಲಹೆ ಸೂಚನೆಗಳನ್ನು ನೀಡಬೇಕೆಂದು ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಸಿಲಿನ ಭೀಕರ ತಾಪಕ್ಕೆ ತತ್ತರಿಸಿದ ಯಾದಗಿರಿ



**ಯಾದಗಿರಿ: ಮಾ.12:**ಜಿಲ್ಲೆಯಲ್ಲಿ ದಿನೇದಿನೇ ಹೆಚ್ಚುತ್ತಿರುವ ಉಷ್ಣತೆಯ ಅಬ್ಬರದಿಂದ ಜನಜೀವನ ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಮಧ್ಯಾಹ್ನ ವೇಳೆಯಲ್ಲಿ ನಗರದಲ್ಲಿ ಸಂಚರಿಸುವುದು ಜನರಿಗೆ ದೊಡ್ಡ ಸವಾಲಾಗಿ ಪರಿಣಮಿಸಿದೆ. ಸೂರ್ಯನ ಉರಿಯುವ ಕಿರಣಗಳು ಜನರನ್ನು ನಲುಗಿಸುತ್ತಿರುವ ಈ ಸಂದರ್ಭದಲ್ಲಿ ಸಾರ್ವಜನಿಕರ ಆರೋಗ್ಯ ಹಾಗೂ ಸುರಕ್ಷತೆಯನ್ನು ಕಾಪಾಡುವುದು ನಗರ ಆಡಳಿತದ ಅತ್ಯಂತ ಪ್ರಮುಖ ಜವಾಬ್ದಾರಿಯಾಗಿದೆ ಎಂದು ಬಿಜೆಪಿ ಮಾಜಿ ನಗರ ಮಂಡಲ ಅಧ್ಯಕ್ಷ ಮಂಜುನಾಥ್ ಜಡಿ ತಿಳಿಸಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ಅವರು, ನಗರದ ಪ್ರಮುಖ ಟ್ರಾಫಿಕ್ ಸಿಗ್ನಲ್‌ಗಳು ಮತ್ತು ಜಂಕ್ಷನ್‌ಗಳಲ್ಲಿ ವಾಹನ ಸವಾರರು ಹಾಗೂ ಪಾದಚಾರಿಗಳು ಉರಿಯುತ್ತಿರುವ ಬಿಸಿಲಿನ ನಡುವೆ ದೀರ್ಘ ಕಾಲ ನಿಲ್ಲಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ತಲೆಸುತ್ತು, ದೇಹದ ದೌರ್ಬಲ್ಯ, ನಿರ್ಜಲೀಕರಣ ಸೇರಿದಂತೆ ಹೀಟ್ ಸ್ಟ್ರೋಕ್‌ನಂತಹ ಗಂಭೀರ ಆರೋಗ್ಯ ಸಮಸ್ಯೆಗಳು ಉಂಟಾಗುವ ಸಾಧ್ಯತೆ ಹೆಚ್ಚಾಗಿದೆ ಎಂದು ಎಚ್ಚರಿಸಿದರು.

ಈ ಹಿನ್ನೆಲೆ ನಗರ ಪೌರಾಯುಕ್ತರು ಹಾಗೂ ನಗರಸಭೆ ಆಡಳಿತ ತಕ್ಷಣ ಕಾರ್ಯಪ್ರವೃತ್ತರಾಗಿ ಪ್ರಮುಖ ಟ್ರಾಫಿಕ್ ಸಿಗ್ನಲ್‌ಗಳು ಮತ್ತು ಜನಸಂದಣಿ ಹೆಚ್ಚಿರುವ ಜಂಕ್ಷನ್‌ಗಳಲ್ಲಿ ನೆರಳು ಒದಗಿಸುವ ಉದ್ದೇಶದಿಂದ ಹಸಿರು ಷೇಡ್ ನೆಟ್ ಅಥವಾ ತಾತ್ಕಾಲಿಕ ಶೆಡ್ ವ್ಯವಸ್ಥೆ ಅಳವಡಿಸುವಂತೆ ಅವರು ಒತ್ತಾಯಿಸಿದರು. ಇಂತಹ ವ್ಯವಸ್ಥೆಗಳಿಂದ ವಾಹನ ಸವಾರರು ಮತ್ತು ಪಾದಚಾರಿಗಳು ಬಿಸಿಲಿನ ತೀವ್ರತೆಯಿಂದ ಸ್ವಲ್ಪ ಮಟ್ಟಿಗೆ ರಕ್ಷಣೆ ಪಡೆಯಲಿದ್ದು, ಸಂಚಾರದಲ್ಲಿಯೂ ಅನುಕೂಲವಾಗಲಿದೆ ಎಂದು ಹೇಳಿದರು.

ಇದಕ್ಕೂ ಜೊತೆಗೆ ನಗರದ ರೈಲ್ವೆ ನಿಲ್ದಾಣ, ಬಸ್ ನಿಲ್ದಾಣ, ಪ್ರಮುಖ ಮಾರುಕಟ್ಟೆ ಪ್ರದೇಶಗಳು, ಸರ್ಕಾರಿ ಕಚೇರಿಗಳ ಮುಂಭಾಗ ಹಾಗೂ ಜನಸಂದಣಿ ಹೆಚ್ಚಿರುವ ಸ್ಥಳಗಳಲ್ಲಿ ಶುದ್ಧ ಕುಡಿಯುವ ನೀರಿನ ಅರವಟ್ಟಿಗೆಗಳನ್ನು ತುರ್ತಾಗಿ ಪ್ರಾರಂಭಿಸಬೇಕಾಗಿದೆ. ಸಾರ್ವಜನಿಕರಿಗೆ ಸುಲಭವಾಗಿ ಕುಡಿಯುವ ನೀರು ದೊರೆಯುವಂತೆ ತಾತ್ಕಾಲಿಕ ನೀರಿನ ಕೇಂದ್ರಗಳನ್ನು ಸ್ಥಾಪಿಸುವುದು ಕಾಲದ ಅಗತ್ಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ನಗರದ ವಿವಿಧ ಪ್ರದೇಶಗಳಲ್ಲಿ ಈಗಾಗಲೇ ಇರುವ ಕುಡಿಯುವ ನೀರಿನ ಘಟಕಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿವೆಯೇ ಎಂಬುದನ್ನು ಅಧಿಕಾರಿಗಳು ಪರಿಶೀಲಿಸಿ, ಅವುಗಳ ನಿರ್ವಹಣೆಗೆ ವಿಶೇಷ ತಂಡವನ್ನು ನಿಯೋಜಿಸಬೇಕು ಎಂದು ಕೂಡ ಅವರು ಸಲಹೆ ನೀಡಿದರು.

ತೀವ್ರ ಬಿಸಿಲಿನ ಹೊಡೆತದಿಂದ ಜನರು ಸಂಕಷ್ಟಕ್ಕೆ ಒಳಗಾಗುತ್ತಿರುವ ಸಂದರ್ಭದಲ್ಲಿ ನಗರ ಆಡಳಿತವು ಮಾನವೀಯ ದೃಷ್ಟಿಕೋನದಿಂದ ಸ್ಪಂದಿಸಿ ಸಾರ್ವಜನಿಕರ ಆರೋಗ್ಯ ಮತ್ತು ಸುರಕ್ಷತೆಯನ್ನು ಕಾಪಾಡುವ ತುರ್ತು ಕ್ರಮಗಳನ್ನು ಕೈಗೊಳ್ಳಬೇಕಾಗಿದೆ. ಆದ್ದರಿಂದ ನಗರ ಪೌರಾಯುಕ್ತರು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಕೂಡಲೇ ಅಗತ್ಯ ಕ್ರಮಗಳನ್ನು ಜಾರಿಗೆ ತರಬೇಕೆಂದು ಮಂಜುನಾಥ್ ಜಡಿ ಆಗ್ರಹಿಸಿದ್ದಾರೆ.

# ಮನೆ ಅಂಗಳದಲ್ಲಿ ವಿದ್ಯಾರ್ಥಿಗಳೊಂದಿಗೆ ಡಿ.ಸಿ. ಸಂವಾದ:ಧೈರ್ಯದಿಂದ ಪರೀಕ್ಷೆ ಬರೆಯಿರಿ,ರಾಜ್ಯಕ್ಕೆ ಟಾಪರ್ ಆಗಿ ಹೊರಹೊಮ್ಮಿ



**ಕಲಬುರಗಿ,ಮಾ.12:** ಜಿಲ್ಲಾಧಿಕಾರಿ ಬಿ.ಪೌಜಿಯಾ ತರನ್ನಮ್ ಬಧವಾರ ಬೆಳಿಗ್ಗೆ ತಮ್ಮ ಅಧಿಕೃತ ನಿವಾಸದ ಅಂಗಳದಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆ ಬರೆಯಲು ಅಣಿಯಾಗಿರುವ ಜಿಲ್ಲೆಯ ಆಯ್ದ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಯಾವುದೇ ಆತಂಕಕ್ಕೆ ಒಳಗಾಗದೆ ಧೈರ್ಯದಿಂದ ಪರೀಕ್ಷೆ ಬರೆಯಿರಿ, ರಾಜ್ಯಕ್ಕೆ ಟಾಪರ್ ಆಗಿ ಹೊರಹೊಮ್ಮಿ ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಇಲ್ಲಿನ ಜಗತ್ ವೃತ್ತದಲ್ಲಿರುವ ತಮ್ಮ ನಿವಾಸದಲ್ಲಿ ಪ್ರಸಕ್ತ 2025-26ನೇ ಶೈಕ್ಷಣಿಕ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆ-1 ಇದೇ ಮಾರ್ಚ್ 18 ರಿಂದ ಆರಂಭವಾಗಲಿರುವ ಹಿನ್ನೆಲೆಯಲ್ಲಿ ಜಿಲ್ಲೆಯ ಸಮಾರು 20 ಶಾಲೆಗಳ 40 ವಿದ್ಯಾರ್ಥಿಗಳೊಂದಿಗೆ ಮುಕ್ತ ಸಂವಾದ ನಡೆಸಿ ಅವರ ಸಮಸ್ಯೆಗಳಿಗೆ ಕಿವಿಯಾಗಿದಲ್ಲದೆ ಪರೀಕ್ಷೆ ಎದುರಿಸಲು ಇರುವ ಆತಂಕಗಳನ್ನು, ಸವಾಲು, ಸಮಯ ಪರಿಪಾಲನೆ ಕುರಿತು ವಿದ್ಯಾರ್ಥಿಗಳ ಪ್ರಶ್ನೆಗೆ ಉತ್ತರಿಸಿದರು.

ಸಂವಾದದಲ್ಲಿ ಭಾಗವಹಿಸಿದ ಅನೇಕ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಪಿ. ಪರೀಕ್ಷೆ ಕ್ರ್ಯಾಕ್ ಮಾಡಲು ಎಷ್ಟು ಸಮಯ ಓದಿಗೆ ಮೀಸಲಿಡಬೇಕು, ಸಮಯ ಪರಿಪಾಲನೆ ಹೇಗೆ, ಮಾದರಿ ಮತ್ತು ಪೂರ್ವಭಾವಿ ಪ್ರಶ್ನೆ ಪತ್ರಿಕೆಯಲ್ಲಿನ ಪ್ರಶ್ನೆಗಳೆ ಮುಖ್ಯ ಪರೀಕ್ಷಗೆ ಕೇಳಲಾಗುತ್ತಾ ಹೀಗೆ ಅನೇಕ ಪ್ರಶ್ನೆಗಳನು ಡಿ.ಸಿ. ಮುಂದಿಟ್ಟು ಪರಿಹಾರ ಪಡೆದುಕೊಂಡರು.

ನಂತರ ಮಾತನಾಡಿದ ಜಿಲ್ಲಾಧಿಕಾರಿಗಳು, ಉಜ್ವಲ ಭವಿಷ್ಯಕ್ಕೆ ಪ್ರೌಢ ಶಿಕ್ಷಣ ಭದ್ರ ಬುನಾದಿಯಾಗಿದೆ. ಮುಂದೆ ನೀವು ಮೆಡಿಕಲ್, ಇಂಜಿನೀಯರಿಂಗ್ ಐ.ಐ.ಟಿ.ದಂತಹ ಉನ್ನತ ಶಿಕ್ಷಣ ಕೋರ್ಸ್ ಪಡೆಯುವುದಕ್ಕಾಗಲಿ ಅಥವಾ ಕೆ.ಎ.ಎಸ್, ಐ..ಎ.ಎಸ್., ಐ.ಪಿ.ಎಸ್. ಪರೀಕ್ಷೆ ಎದರಿಸಬೇಕಾದರೆ ಎಸ್.ಎಸ್.ಎಲ್.ಸಿ., ಪಿ.ಯು.ಸಿ. ಅಂಕ ಪ್ರಮುಖ ಪಾತ್ರ ವಹಿಸುತ್ತದೆ. ವಿದ್ಯಾರ್ಥಿ ದೆಸೆಯ ಪ್ರಮುಖ ಘಟ್ಟ ಇದಾಗಿದೆ. ಸಹಪಾಠಿ ಅಥವಾ ಶಾಲೆಗೆ ಟಾಪರ್ ಆಗಬೇಕೆಂಬ ಸಣ್ಣ ಸವಾಲುಗಳನ್ನು ಬದಿಗೊತ್ತಿ ನಿಮ್ಮ ಉಜ್ವಲ ಭವಿಷ್ಯಕ್ಕೆ, ಒಳ್ಳೆಯ ಹುದ್ದೆಯ ನೌಕರಿ ಪಡೆಯಲು, ಹೆತ್ತವರ ಆಸೆ ಈಡೇರಿಸಲು, ಮಂದೆ ಏನನ್ನಾದರು ಸಾಧನೆಗೆ ದೊಡ್ಡ ಸವಾಲನ್ನು ಎದುರಿಸಲು ಸಜ್ಜಾಗಬೇಕು. ಇದಕ್ಕಾಗಿ ಜ್ಞಾನಾರ್ಜನೆ, ಕೌಶಲ್ಯ, ಉತ್ತಮ ಅಂಕ ಮುಖ್ಯ ಪಾತ್ರ ವಹಿಸುತ್ತದೆ ಎಂಬುದನ್ನು ಮರೆಯಬಾರದು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕಲಬುರಗಿಯಲ್ಲಿ ಜಿಲ್ಲಾಧಿಕಾರಿಗಳಾಗಿ ಸೇವೆ ಸಲ್ಲಿಸಲು ಬಹತೇಕ ಅಧಿಕಾರಿಗಳೆ ಇಲ್ಲಿಗೆ ಬರುತ್ತಾರೆ, ನೀವ್ಯಾಕ್ಯಾಗಬಾರದು ಎಂದು ವಿದ್ಯಾರ್ಥಿಗಳನ್ನು ಮರು ಪ್ರಶ್ನಿಸಿದ ಡಿ.ಸಿ. ಬಿ.ಫೌಜಿಯಾ ತರನ್ನಮ್ ನೀವು ದೊಡ್ಡ ಗುರಿ, ಕನಸು ಇಟ್ಟುಕೊಳ್ಳಿ. ಅದನ್ನು ಈಡೇರಿಸಲು ಹಗಲು ರಾತ್ರಿ ಶ್ರಮಪಟ್ಟು ಓದಿದಲ್ಲಿ ಯಶಸ್ಸು ಕಟ್ಟಿಟ್ಟಬುತ್ತಿ. ಗುರಿ ಬೆನ್ನತ್ತಿ ಸಾಗಬೇಕು. ಸಾಗುವಾಗ ಶಾರ್ಟಕಟ್ ದಾರಿ ಬೇಡ. ನಾವು ಹಿಂದುಳಿದವರು, ಹಳ್ಳಿಯಿಂದ ಬಂದವರು, ನಮ್ಮಿಂದ ಆಗಲ್ಲ ಎಂಬಿತ್ಯಾದಿ ಕೀಳರಿಮೆ ಬಿಟ್ಟು ನಾವು ಮುಂದೆ ಸಾಗಬೇಕಿದೆ. ತಾನು ಸಹ ದಿಲ್ಲಿ ಕೋಚಿಂಗ್ ಪಡೆಯದೆ ಲೈಬ್ರರಿ ಸಹಾಯ ಪಡೆದುಕೊಂಡೆ ಮನೆಯಲ್ಲಿಯೆ ಓದಿಕೊಂಡು ಐ.ಎ.ಎಸ್. ಪರೀಕ್ಷೆ ಪಾಸಾದೆ ಎಂದು ಬಿ.ಫೌಜಿಯಾ ತರನ್ನುಮ್ ಹೇಳಿಕೊಂಡರು.

ಇನ್ನು ಕೊನೆಗೆ ಡಿ.ಸಿ. ಬಿ.ಫೌಜಿಯಾ ತರನ್ನುಮ್ ಅವರು ಸಂವಾದದಲ್ಲಿ ಭಾಗವಹಿಸಿದ ಶಾಲಾ ಮಕ್ಕಳಿಗೆ ಪೆನ್, ಬಿಸ್ಕತ್, ಚಾಕಲೇಟ್, ಜ್ಯೂಸ್, ಹಣ್ಣುಗಳನ್ನು ನೀಡಿ ಸರಿಯಾಗಿ ಪರೀಕ್ಷೆ ಬರೆಯುವಂತೆ ಶುಭ ಕೋರಿದೆ. ಶಾಲಾ ಶಿಕ್ಷಣ ಇಲಾಖೆಯ ಪ್ರಭಾರಿ ಉಪನಿರ್ದೇಶಕಿ ಶಂಕ್ರಮ್ಮ ಢವಳಗಿ, ವಿಷಯ ನಿರ್ವಾಹಕ ರಮೇಶ ಇದ್ದರು.

## ವಚನ ಕಲ್ಯಾಣ 9 ಗಂಟೆಗಳ ನಾಟಕ ಅಹೋರಾತ್ರಿ ರಂಗ ಪ್ರಯೋಗಕ್ಕೆ ಕಲಾವಿದರ ಆಯ್ಕೆಗೆ ಅರ್ಜಿ ಆಹ್ವಾನ

**ರಾಯಚೂರು ಮಾ,12-** ಕರ್ನಾಟಕ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ವಚನ ಕಲ್ಯಾಣ ಎಂಬ ಅಹೋರಾತ್ರಿ (ಒಂಬತ್ತು ಗಂಟೆ) ನಾಟಕವನ್ನು ಸಿದ್ಧಪಡಿಸಿ, ನಾಡಿನಾದ್ಯಂತ ಪ್ರದರ್ಶನ ಮಾಡಲು ಇಲಾಖೆ ಉದ್ದೇಶಿಸಿದೆ. ಆ ಸಂಬಂಧ ನುರಿತ ಹಾಗೂ ಆಸಕ್ತ ಯುವಕ ಯುವತಿಯರು ಹಾಗೂ ಅನುಭವಿ ರಂಗಕಲಾವಿದರು/ಗಾಯಕರುಗಳಿಂದ ಅರ್ಜಿಗಳನ್ನು ಅಹ್ವಾನಿಸಿದೆ (ಅರ್ಜಿ ಲಗತ್ತಿಸಿದೆ), ವಯೋಮಿತಿ 18 ರಿಂದ 40 ವರ್ಷಗಳು ರಂಗಶಿಕ್ಷಣದಲ್ಲಿ ತರಬೇತಿ ಪಡೆದ ಹಾಗೂ ನಾಟಕಗಳಲ್ಲಿ ಅಭಿನಯಿಸಿದ ಕಲಾವಿದರಿಗೆ ಅದ್ಯತೆ ನೀಡಲಾಗುವುದು. ತುಂಬಿದ ಅರ್ಜಿಗಳನ್ನು ದಿನಾಂಕ 20 ಮಾರ್ಚ್ 2026ರ ಒಳಗೆ ಸದಸ್ಯ ಕಾರ್ಯದರ್ಶಿ ಸಂತ ಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ, ಕಲಾಗ್ರಾಮ, ಮಲ್ಲತ್ತಹಳ್ಳಿ, ಬೆಂಗಳೂರು-560056. ಇಲ್ಲಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪುವಂತೆ ಅಥವಾ ಮೇಲ್ ವಿಳಾಸ: kanakaresearchcentre@gmail.com ದ ಮೂಲಕ ಸಲ್ಲಿಸಲು ಕೋರಿದೆ. ಆಯ್ಕೆಯಾದ ಅಭ್ಯರ್ಥಿಗಳು ಮೂರು ತಿಂಗಳ ಕಾಲದ ಅವಧಿಯಲ್ಲಿ ಪೂರ್ಣಕಾಲಿಕವಾಗಿ ತರಬೇತಿ-ಪ್ರದರ್ಶನಗಳಲ್ಲಿ ಪಾಲ್ಗೊಳ್ಳುವುದು ಕಡ್ಡಾಯ. ಮಾಸಿಕ ಗೌರವಧನ ಮತ್ತು ಊಟ-ವಸತಿ ವ್ಯವಸ್ಥೆಯನ್ನು ಮಾಡಲಾಗುವುದು. ಅರ್ಜಿಯ ನಮೂನೆಯನ್ನು ಕನ್ನಡ ಸಂಸ್ಕೃತಿ ಇಲಾಖೆಯ ವೆಬ್ ಸೈಟ್ kannadasiri.karnataka. gov.in ನಲ್ಲಿ ಪಡೆಯಬಹುದು. ಹೆಚ್ಚಿನ ಮಾಹಿತಿ ವಿವರಗಳಿಗಾಗಿ ಶ್ರೀ ಸಿ. ಬಸವಲಿಂಗಯ್ಯ (ವಚನ ಕಲ್ಯಾಣ ನಾಟಕದ ನಿರ್ದೇಶಕರು) ಇವರಲ್ಲಿ ಮಾಹಿತಿ ಪಡೆಯಬಹುದು ಮೊಬೈಲ್ ಸಂಪರ್ಕ ಸಂಖ್ಯೆ: 9448538620. ಸಂದರ್ಶನಕ್ಕೆ ಹಾಜರಾಗುವ ಕಲಾವಿದರಿಗೆ ಇಲಾಖೆಯು ಯಾವುದೇ ಭತ್ಯೆ ನೀಡಲಾಗುವುದಿಲ್ಲ ಎಂದು ಪ್ರಕಟಣೆ ತಿಳಿಸಿದೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE